# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ


**ಸುಭಾಷಿತ:**
ನಾನೇ ದೊಡ್ಡವನೆಂಬ ಅಹಂಕಾರ ಬೇಡವೇ ಬೇಡ.
ಸಹನೆ ತಾಳ್ಮೆ ಇರುವವರು ದೇವರಿದ್ದಂತೆ,
ಕೋಪ ತಾಪ ಇರುವವರು ಶತ್ರುಗಳಂತೆ,
ಯೋಗಭಾಗ್ಯವ ಪಡೆದವರು ಯೋಗಿಗಳಂತೆ,
ಪಾಪಕರ್ಮದಿ ತೊಡಗಿದವರು ಪಾಪಿಗಳಂತೆ,
ನ್ಯಾಯನೀತಿಯಲ್ಲಿ ಸಾಗುವವರು ಮನುಜರಂತೆ,
ಸತ್ಯಧರ್ಮದಲ್ಲಿ ನಡೆದು ಬಾಳುವವರು
ಭೂಮಿ ಪುತ್ರರಂತೆ, ಕಂಡರೂ ಎಲ್ಲವನ್ನು
ಅಲೆಯುವವನು ಭಗವಂತನೊಬ್ಬನೇ..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 17-01-2025 to 23-01-2025 ಬೆಲೆ: 7-00 ಸಂಪುಟ–4 ಸಂಚಿಕೆ–30 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ನಗರಗಳಲ್ಲಿ ಇತ್ತೀಚಿನ ದಿನಗಳಲ್ಲಿ ಬೀದಿ ನಾಯಿಗಳು ಹೆಚ್ಚಾಗುತ್ತಿರುವುದರಿಂದ ಕೆಲವು ರಸ್ತೆಗಳಲ್ಲಿ ನಡೆದಾಡಲು ಕಷ್ಟವಾಗುತ್ತಿದೆ. ಎನ್ನುವ ಅಳಲನ್ನು ಸಾರ್ವಜನಕರು ತೋಡಿಕೊಳ್ಳುತ್ತಿದ್ದಾರೆ. ಅದು ಅಲ್ಲದೇ ಸಾಕು ನಾಯಿಗಳನ್ನು ವಾಕಿಂಗ್ ನೆಪದಲ್ಲಿ ಬೀದಿಗಳಲ್ಲಿ ಕರೆದುಕೊಂಡು ಹೋಗಿ ರಸ್ತೆಯ ಅಕ್ಕ ಪಕ್ಕ ಗಲೀಜುಮಾಡಿಸುವುದರಿಂದ ನಡೆದಾಡುವುದು ಕಷ್ಟವಾಗುತ್ತಿದೆ ಎನ್ನುವ ಅಳಲು ಕೂಡ ಇದೆ. ಇದರ ನಡುವೆ ಬೀದಿ ನಾಯಿಗಳಿಗೆ ಊಟ ಹಾಕಿ ಅದರ ಹಾರೈಕೆ ಮಾಡುವವರ ಸಂಖ್ಯೆಯೂ ನಮ್ಮಲ್ಲಿ ಹೆಚ್ಚಾಗಿಯೇ ಇದೆ. ಅವರೇನೋ ಸಹಾನುಭೂತಿಯಿಂದ ನಾಯಿಗಳಿಗೆ ಊಟ ಹಾಕುತ್ತಾರೆ. ಆದರೆ ಅದರಿಂದ ಈ ನಾಯಿಗಳಿಂದ ಆಗುತ್ತಿರುವ ತೊಂದರೆಗೆ ಪರಿಹಾರ ಯಾರು ಹುಡುಕಬೇಕು?

## ಮಾಧ್ಯಮಗಳ ಮುಂದೆ ಮಾತನಾಡಿದರೆ ಹುದ್ದೆ ಸಿಗೋದಿಲ್ಲ –ಡಿ. ಕೆ. ಶಿ.



**ಬೆಂಗಳೂರು:** ಕೆಪಿಸಿಸಿ ಹುದ್ದೆ ಅಂಗಡಿಯಲ್ಲೂ ಸಿಗುವುದಿಲ್ಲ, ಮಾಧ್ಯಮಗಳ ಮುಂದೆ ಮಾತನಾಡಿದರೂ ಸಿಗುವುದಿಲ್ಲ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಅವರು ಖಾರವಾಗಿ ಪ್ರತಿಕ್ರಿಯಿಸಿದ್ದಾರೆ. ಮಾಧ್ಯಮದವರ ಜೊತೆ ಮಾತನಾಡಿ, "ನಾವು ಮಾಡುವ ಕೆಲಸ, ಶ್ರಮವನ್ನು ಪಕ್ಷದ ನಾಯಕರು ಗುರುತಿಸಿ ಅದಕ್ಕೆ ಸೂಕ್ತವಾಗಿ ಹುದ್ದೆ ನೀಡುತ್ತಾರೆ. ಮಾಧ್ಯಮಗಳ ಮುಖಾಂತರ ಯಾರಾದರೂ ಹುದ್ದೆ ಕೇಳುತ್ತಾರೆಯೇ? ಇದನ್ನೆಲ್ಲಾ ಹೊಸದಾಗಿ ಕೇಳುತ್ತಿರುವೆ" ಎಂದರು. ಪಕ್ಷದ ವಿಚಾರದ ವಿಚಾರವಾಗಿ ಯಾವುದೇ ಬೆಳವಣಿಗೆ ಇದ್ದರೂ ನಾನೇ ಮಾಧ್ಯಮಗೋಷ್ಠಿ ಕರೆದು ಮಾಹಿತಿ ನೀಡುತ್ತೇನೆ. ಈಗ ನಮ್ಮ ಪಕ್ಷ ಸಂಘಟನೆ ಮಾಡಿ, ಪಕ್ಷ ಉಳಿಸಿ, ಬೆಳೆಸುವ ಕೆಲಸ ಮಾಡಬೇಕು. ಪಕ್ಷದಲ್ಲಿ ಎಲ್ಲರೂ ಶಿಸ್ತು ಕಾಪಾಡಬೇಕು ಎಂದು ನಮ್ಮ ಮುಖ್ಯಮಂತ್ರಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು ಬುದ್ಧಿವಾದ ಹೇಳಿದ್ದಾರೆ. ಯಾವುದೇ ವಿಚಾರವಾಗಿ ಬಹಿರಂಗವಾಗಿ ಚರ್ಚೆ ಮಾಡದಂತೆ ಸೂಚಿಸಿದ್ದಾರೆ" ಎಂದು ತಿಳಿಸಿದರು. ಪಕ್ಷದ ವಿಚಾರ ಮಾಧ್ಯಮಗಳ 3ನೇ ಪುಟಕ್ಕೆ

## ಕರ್ನಾಟಕ ಜಂಗಲ್ ರಾಜ್ ಆಗಿದೆ–ಬೊಮ್ಮಾಯಿ



**ಬೆಂಗಳೂರು:** ರಾಜ್ಯದಲ್ಲಿ ದಿನನಿತ್ಯ ಹಗಲು ದರೋಡೆ, ಪುಟ್ಟ ಮಕ್ಕಳ ಮೇಲೆ ಅತ್ಯಾಚಾರದಂತ ಅಪರಾಧ ಕೃತ್ಯಗಳು ರಾಜಾರೋಷವಾಗಿ ನಡೆಯುತ್ತಿದ್ದು, ಅಪರಾಧ ಮಾಡುವವರಿಗೆ ಯಾರದೇ ಭಯವಿಲ್ಲದಂತಾಗಿದೆ. ಇದರಿಂದ ಕರ್ನಾಟಕ ಜಂಗಲ್ ರಾಜ್ಯ ಆಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಈ ಕುರಿತು ಎಕ್ಸ್ ಮಾಡಿರುವ ಅವರು, ಬೀದರನಲ್ಲಿ ಹಾಡಹಗಲೇ ಎಟಿಎಂಗೆ ಹಣ ತುಂಬಲು ಬಂದವರ ಮೇಲೆ ಗುಂಡಿನ ದಾಳಿ ನಡೆಸಿ ಹತ್ಯೆ ಮಾಡಿರುವುದು ರಾಜ್ಯವೇ ಬೆಚ್ಚಿ ಬೀಳುವಂತೆ ಮಾಡಿದೆ. ಆಡಳಿತ ನಡೆಸುವವರು ಕುರ್ಚಿಗಾಗಿ ಕಿತ್ತಾಟ ನಡೆಸುವುದರಲ್ಲಿ ನಿರತರಾಗಿದ್ದು, ಸರ್ಕಾರಕ್ಕೆ ಪೊಲೀಸರ ಮೇಲೆ ನಿಯಂತ್ರಣ ಇಲ್ಲದಂತಾಗಿದೆ. ಪೊಲಿಸರಿಗೆ ಕ್ರಿಮಿನಲ್‌ಗಳ ಮೇಲೆ ನಿಯಂತ್ರಣ ಇಲ್ಲದಂತಾಗಿದ್ದು, ಕರ್ನಾಟಕ ಜಂಗಲ್ ರಾಜ್ಯ ಆಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಈ ಸರ್ಕಾರದ ಅವಧಿಯಲ್ಲಿ ಮೂಕ ಪ್ರಾಣಿಗಳು, ಮನುಷ್ಯರು ಯಾರಿಗೂ ರಕ್ಷಣೆ ಇಲ್ಲದಂತಾಗಿದೆ. ರಾಜ್ಯ ಸರ್ಕಾರ ತಪ್ಪಿತಸ್ಥರ ಮೇಲೆ ಕೂಡಲೇ ಕ್ರಮ ಕೈಗೊಂಡು ಕಠಿಣ ಶಿಕ್ಷೆ ನೀಡಬೇಕು. ಇಲ್ಲದಿದ್ದರೆ ರಾಜ್ಯದ ಜನರು ದಂಗೆ ಏಳುತ್ತಾರೆ ಎಂದು ಎಚ್ಚರಿಸಿದ್ದಾರೆ.

## ಮಂಗಳೂರು ಕ್ಷೇತ್ರದಲ್ಲಿ ಒಗ್ಗಟ್ಟಾಗಿರಬೇಕು: ಬ್ರಿಜೇಶ್ ಚೌಟ



**ಮಂಗಳೂರು:** ಮುಖಂಡರಾದವರ ವೈಯುಕ್ತಿಕ ಭಾವನೆ ಏನೇ ಇದ್ದರೂ ಮತದಾರರು, ಕಾಯಕರ್ತರಿಗಾಗಿ ಎಲ್ಲರೂ ಒಟ್ಟಾಗಿ ದೀಪ ಹಚ್ಚುವ ಕೆಲಸ ಮಾಡೋಣ ಎಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಹೇಳಿದರು. ಅಸ್ಯೆಗೋಳಿಯ ಬಂಟರ ಭವನದಲ್ಲಿ ನಡೆದ ಬಿಜೆಪಿ ಮಂಗಳೂರು ವಿಧಾನಸಭಾ ಕ್ಷೇತ್ರದ ಸಂಘಟನಾ ಪರ್ವ ಸಭೆಯಲ್ಲಿ ಮಂಗಳೂರು ಮಂಡಲದ ಅಧ್ಯಕ್ಷರಾಗಿ ಮರು ಆಯ್ಕೆಗೊಂಡ ಜಗದೀಶ್ ಆಳ್ವ ಕುವೆತ್ತಬೈಲ್ ಅವರ ಅಧಿಕಾರ ಹಸ್ತಾಂತರ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಾ 3ನೇ ಪುಟಕ್ಕೆ










## ಸುದ್ಧಿ ತುಣುಕು

ಬಾಂಗ್ಲಾದೇಶದಲ್ಲಿ ಆಘಾತಕಾರಿ ಬೆಳವಣಿಗೆಯೊಂದರಲ್ಲಿ ಭಾರತ ವಿರೋಧಿ ಮೂಲಭೂತವಾದಿ ಬಾಬರ್ ಜೈಲಿನಿಂದ ಬಿಡುಗಡೆಯಾಗಿದ್ದಾನೆ.

ಬೀದರ್‌ನಲ್ಲಿ ಸಿನಿಮಾ ಸ್ಟೈಲ್‌ನಲ್ಲಿ ದರೋಡೆಯಲ್ಲಿ ಗುಂಡಿನ ದಾಳಿಯಲ್ಲಿ ಒಬ್ಬ ಸಿಬ್ಬಂದಿ ಸಾವು, 93 ಲಕ್ಷ ದೋಚಿ ದುಷ್ಕರ್ಮಿಗಳು ಎಸ್ಕೇಪ್.

ಆನೇಕಲ್‌ನ ಜಿಗಣಿಯ ಕೆರೆಯಲ್ಲಿ ಮೊಸಳೆಯೊಂದು ಜನತೆಯ ಕಣ್ಣಿಗೆ ಬೀಳುತ್ತಿದ್ದು, ಇದೀಗ ಅದರ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುವ ಮೂಲಕ ಮೊಸಳೆಯ ಇರುವಿಕೆ ಖಾತರಿಯಾಗಿದೆ.

ಬೀದರ್‌ನಲ್ಲಿ ಎಟಿಎಂಗೆ ಹಣ ತುಂಬಲು ಬಂದಿದ್ದ ಎಸ್‌ಬಿಐ ಭದ್ರತಾ ಸಿಬ್ಬಂದಿಗೆ ಗುಂಡಿಕ್ಕಿ, 93 ಲಕ್ಷ ರೂ. ಹಣದೊಂದಿಗೆ ಪರಾರಿಯಾಗಿದ್ದ ಇಬ್ಬರು ಹೈದರಾಬಾದ್‌ನಲ್ಲಿ ಬೀದರ್ ಪೊಲೀಸರ ಕೈಯ್ಯಿಂದ ಸ್ವಲ್ಪದರಲ್ಲೇ ತಪ್ಪಿಸಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ.

ಎಚ್‌ಎಂಟಿ ಸ್ವಾಧೀನದಲ್ಲಿರುವ 14,300 ಕೋಟಿ ರೂ.ಮೌಲ್ಯದ ಅರಣ್ಯ ಭೂಮಿ ಹಿಂಪಡೆಯಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್.ಕೆ.ಪಾಟೀಲ್ ಹೇಳಿದ್ದಾರೆ.

ಶ್ರೀಹರಿಕೋಟಾದಲ್ಲಿ ಮೂರನೇ ಉಡಾವಣಾ ಘಟಕ ನಿರ್ಮಾಣಕ್ಕೆ ಕೇಂದ್ರ ಸಂಪುಟ ಅಸ್ತು.

ಕೆಪಿಸಿಸಿಯಿಂದ ನೋಟಿಸ್ ಕೊಟ್ಟ ತಕ್ಷಣ ಯಾವುದೇ ದೊಡ್ಡ ಅನಾಹುತ ಆಗುವುದಿಲ್ಲ. ಅದಕ್ಕೆ ಸ್ಪಷ್ಟ ಉತ್ತರವನ್ನು ಅಧ್ಯಕ್ಷರ ಮುಂದೆ ನೀಡಲಾಗುವುದು ಎಂದು ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಸತೀಶ್ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷರಾದರೆ ಸಂತೋಷ ಪಡುವವರಲ್ಲಿ ನಾನು ಮೊದಲಿಗ ಎಂದದ ಕೆ.ಎನ್.ರಾಜಣ್ಣ ಹೇಳಿದ್ದಾರೆ.

ತಮಿಳುನಾಡಿನ ವಿವಿಧೆಡೆಗಳಲ್ಲಿ ಜಲ್ಲಿಕಟ್ಟು ಮತ್ತು ಸಂಬಂಧಿತ ಹೋರಿ ಪಳಗಿಸುವ ಸ್ಪರ್ಧೆಗಳಲ್ಲಿ ಕನಿಷ್ಠ ಏಳು ಮಂದಿ ಜೀವ ಕಳೆದುಕೊಂಡಿದ್ದು, 400ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಜಾತ್ಯತೀತತೆ ಸಂರಕ್ಷಣೆಗೆ ಪ್ರಾರ್ಥನಾ ಸ್ಥಳಗಳ ಕಾಯ್ದೆ ಅಗತ್ಯ ಎಂದು ಸುಪ್ರೀಂ ಮೊರೆ ಹೋದ ಕಾಂಗ್ರೆಸ್

ಅಸ್ಸಾಂನ ಪ್ರವಾಹ ಪೀಡಿತ ಗಣಿಯ ಬಳಿ 220ಕ್ಕೂ ಹೆಚ್ಚು ರ‍್ಯಾಟ್ ಹೋಲ್ ಕಲ್ಲಿದ್ದಲು ಗಣಿಗಳ ಪತ್ತೆ

ಭಾರತೀಯ ಕುಸ್ತಿ ಒಕ್ಕೂಟದ ಮಾಜಿ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧದ ಪೋಕ್ಸೊ ಕಾಯ್ದೆ ಪ್ರಕರಣದಲ್ಲಿ ಸಲ್ಲಿಕೆಯಾಗಿರುವ ಮುಕ್ತಾಯ ವರದಿಯನ್ನು ಅಂಗೀಕರಿಸಬೇಕೆ ಬೇಡವೆ ಎಂಬುದರ ಕುರಿತು ಎಪ್ರಿಲ್ 15ರಂದು ದಿಲ್ಲಿ ನ್ಯಾಯಾಲಯ ಆದೇಶ ಹೊರಡಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಅಮೆರಿಕದ ಫೆಡರಲ್ ಬ್ಯೂರೊ ಆಫ್ ಇನ್ವೆಸ್ಟಿಗೇಷನ್‌ನ 10 ಮೋಸ್ಟ್ ವಾಂಟೆಡ್ ದೇಶಭ್ರಷ್ಟರ ಪಟ್ಟಿಯಲ್ಲಿರುವ ಭಾರತದ ಭದ್ರೇಶ್ ಕುಮಾರ್ ಚೇತನ್ ಭಾಯ್ ಪಟೇಲ್ ಬಂಧನಕ್ಕಾಗಿ ಪ್ರಯತ್ನ ಮುಂದುವರಿದಿದೆ

ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಕೆನಡಾ ಮಾಜಿ ಪ್ರಧಾನಿ ಟ್ರೂಡೊ ಘೋಷಣೆ ಮಾಡಿದ್ದಾರೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2015ರ ದತ್ತಾಂಶಗಳ ಅಧ್ಯಯನ ವರದಿಯ ಮುಚ್ಚಿದ ಲಕೋಟೆಯನ್ನು ತೆರೆಯುವ ತೀರ್ಮಾನವನ್ನು ಮುಂದೂಡಲಾಗಿದೆ.

ಬಿಡಿಎ ಆಸ್ತಿ ಮರುವಶ ಮಾಡಿಕೊಳ್ಳಲು ನಡೆಸಿದ ಕಾರ್ಯಾಚರಣೆಯಲ್ಲಿ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 19 ಎಕರೆ ಆಸ್ತಿ ವಶಪಡಿಸಿಕೊಂಡಿದೆ.

## ಕರಿಬೇವಿನ ಚಟ್ನಿಪುಡಿ



**ಬೇಕಾಗಿರುವ ಸಾಮಗ್ರಿಗಳು :**

ಕರಿಬೇವು – 3 ಕಪ್
ಕಡಲೇ ಬೇಳೆ – 1ಕಪ್
ಉದ್ದಿನ ಬೇಳೆ – 1/4 ಕಪ್
ಹುಣಿಸೆ ಹಣ್ಣು – ಚಿಕ್ಕ ನಿಂಬೆ ಹಣ್ಣಿನ ಗಾತ್ರ
ಗಟ್ಟಿ ಇಂಗು – ಕಡಲೇ ಬೀಜದ ಗಾತ್ರ
ಬ್ಯಾಡಗಿ ಮೆಣಸಿನಕಾಯಿ – 15 ರಿಂದ 20
ಗುಂಟೂರು ಮೆಣಸಿನಕಾಯಿ – 6 ರಿಂದ 8
ಉಪ್ಪು – ರುಚಿಗೆ ತಕ್ಕಷ್ಟು
ಒಣ ಕೊಬ್ಬರಿ – 1 ಕಪ್

**ಮಾಡುವ ವಿದಾನ:**

ಮೊದಲಿಗೆ ಒಂದು ಬಾಣಲೆಯಲ್ಲಿ ಕರಿ ಬೇವಿನ ಎಲೆಯನ್ನು ಚೆನ್ನಾಗಿ ಹುರಿದು ತೆಗೆದಿಟ್ಟುಕೊಳ್ಳಬೇಕು. ನಂತರ ಕಡಲೆ ಬೇಳೆ, ಉದ್ದಿನ ಬೇಳೆಯನ್ನು ಬೇರೆ ಬೇರೆಯಾಗಿ ಹುರಿದಿಟ್ಟುಕೊಳ್ಳಬೇಕು. ನಂತರ ಒಣ ಕೊಬ್ಬರಿಯನ್ನು ಚೆನ್ನಾಗಿ ಹುರಿಯಬೇಕು. ನಂತರ ಅದೇ ಬಾಣಲೆಗೆ ಸ್ವಲ್ಪ ಎಣ್ಣೆ ಹಾಕಿ ಮೆಣಸಿನಕಾಯಿಯನ್ನು ಚೆನ್ನಾಗಿ ಹುರಿದುಕೊಳ್ಳಬೇಕು. ಕೊನೆಯಲ್ಲಿ ಇಂಗು ಮತ್ತು ಹುಣಸೆ ಹಣ್ಣನ್ನು ಸ್ವಲ್ಪ ಬಿಸಿ ಮಾಡಿಕೊಳ್ಳಬೇಕು. ಈಗ ಹುರಿದ ಎಲ್ಲಾ ಸಾಮಗ್ರಿಗಳು ತಣ್ಣಗಾದ ನಂತರ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಪುಡಿ ಮಾಡಿದರೆ ರುಚಿಕರವಾದ ಮತ್ತು ಆರೋಗ್ಯಕರ ವಾದ ಕರಿ ಬೇವಿನ ಚಟ್ನಿಪುಡಿ ಸವಿಯಲು ಸಿದ್ದ.

## ಭಾರತ ಸರ್ಕಾರದ ಕ್ಷಮೆಯಾಚಿಸಿದ ಮೆಟಾ




ನವದೆಹಲಿ: 2024ರ ಸಾರ್ವತ್ರಿಕ ಚುನಾವಣೆ ಕುರಿತು ತನ್ನ ಸಹ – ಸಂಸ್ಥಾಪಕ ಹಾಗೂ ಸಿಇಒ ಮಾರ್ಕ್ ಜುಕರ್ ಬರ್ಗ್ ನೀಡಿದ ಹೇಳಿಕೆಗೆ ಸಾಮಾಜಿಕ ಮಾಧ್ಯಮ ದೈತ್ಯ ಮೆಟಾ ಬುಧವಾರ ಭಾರತ ಸರಕಾರದ ಕ್ಷಮೆಯಾಚಿಸಿದೆ. ಜುಕರ್ ಬರ್ಗ್ ಅವರ ಹೇಳಿಕೆ ಅಜಾಗರೂಕತನದಿಂದಾದ ತಪ್ಪು ಮತ್ತು ಭಾರತವು ಕಂಪನಿಯ ದೃಷ್ಟಿಕೋನದಲ್ಲಿ ಪ್ರಮುಖ ರಾಷ್ಟವಾಗಿ ಮುಂದುವರಿಯಲಿದೆ ಎಂದು ಮೆಟಾ ಹೇಳಿದೆ.

## ಉಕ್ರೇನ್ ಯುದ್ಧದಲ್ಲಿ ರಷ್ಯಾದ ಸೇನೆ ಸೇರಿದ್ದ ಕೇರಳಿಗ ಸಾವು



ನವದೆಹಲಿ: ಉಕ್ರೇನ್ ವಿರುದ್ಧ ನಡೆಸುತ್ತಿರುವ ಯುದ್ಧದಲ್ಲಿ ರಷ್ಯಾದ ಸೇನೆಯ ಪರವಾಗಿ ಹೋರಾಟ ನಡೆಸುತ್ತಿದ್ದ ಭಾರತೀಯ ಪ್ರಜೆಯೊಬ್ಬರು ಸಾವನ್ನಪ್ಪಿದ್ದಾರೆ. ಮತ್ತೊಬ್ಬರು ಗಾಯಗೊಂಡಿದ್ದಾರೆ. ಮೃತ ಮತ್ತು ಗಾಯಗೊಂಡ ಭಾರತೀಯರನ್ನು ಕೇರಳದ ಮೂಲದವರು ಎಂದು ಗುರುತಿಸಲಾಗಿದೆ. ಇಬ್ಬರೂ ರಷ್ಯಾದ ಸೇನೆ ಸೇರಿಕೊಂಡಿದ್ದರು. ಈ ಬಗ್ಗೆ ವಿದೇಶಾಂಗ ಸಚಿವಾಲಯ ಮಾಹಿತಿ ಹಂಚಿಕೊಂಡಿದ್ದು, ಕೇರಳ ಮೂಲದ ಭಾರತೀಯ ಪ್ರಜೆ ರಷ್ಯಾ ಉಕ್ರೇನ್ ಯುದ್ಧದಲ್ಲಿ ಸಾವನ್ನಪ್ಪಿದ್ದಾನೆ.

## ಗಾಜಾ ಕದನ ವಿರಾಮ ಮಾತುಕತೆಯಲ್ಲಿ ಪ್ರಗತಿ



ಜೆರುಸಲೇಂ: ಹಮಾಸ್ ಬಳಿ ಇರುವ ಒತ್ತೆಯಾಳುಗಳ ಬಿಡುಗಡೆಗಾಗಿ ಕತಾರ್‌ನಲ್ಲಿ ನಡೆಯುತ್ತಿರುವ ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ವಿರಾಮ ಒಪ್ಪಂದ ಮಾತುಕತೆಗಳಲ್ಲಿ ಪ್ರಗತಿ ಸಾಧಿಸಲಾಗಿದೆ ಎಂದು ಇಸ್ರೇಲ್ ವಿದೇಶಾಂಗ ಸಚಿವ ಗಿಡಿಯನ್ ಸಾರ್ ಹೇಳಿದ್ದಾರೆ. "ಒತ್ತೆಯಾಳುಗಳನ್ನು ಬಿಡುಗಡೆ ಮಾಡುವ ಮಾತುಕತೆಗಳಲ್ಲಿ ಪ್ರಗತಿ ಕಂಡು ಬಂದಿದೆ" ಎಂದು ಜೆರುಸಲೇಂ ಪ್ರವಾಸದಲ್ಲಿರುವ ಡ್ಯಾನಿಶ್ ವಿದೇಶಾಂಗ ಸಚಿವ ಲಾರ್ಸ್ ಲೋಕೆ ರಾಸ್ಮುಸ್ಸೆನ್ ಅವರೊಂದಿಗೆ ಜಂಟಿ ಹೇಳಿಕೆಯಲ್ಲಿ ಸಾರ್ ತಿಳಿಸಿದರು.

## ಪಾಕಿಸ್ತಾನಿಗಳಿಗೆ ವೀಸಾ ಪ್ರಕ್ರಿಯೆ ಸರಳಗೊಳಿಸಿದ ಬಾಂಗ್ಲಾದೇಶ




ಪಾಕಿಸ್ತಾನ : ಭಾರತದ ವಿರುದ್ಧ ಕುಕೃತ್ಯಗಳಿಗೆ ತನ್ನ ನೆಲದಲ್ಲಿ ಪಾಕಿಸ್ತಾನಕ್ಕೆ ಅವಕಾಶ ನೀಡುವುದಿಲ್ಲ ಎಂದಿದ್ದ ಬಾಂಗ್ಲಾದೇಶ, ಇದೀಗ ಆ ದೇಶದ ನಿವಾಸಿಗಳಿಗೆ ತನ್ನ ರಾಷ್ಟಕ್ಕೆ ಬರಲು ವೀಸಾ ಸೇವೆಯನ್ನು ಮತ್ತಷ್ಟು ಸರಳೀಕರಿಸಿದೆ. ನೆರೆಯ ಮುಸ್ಲಿಂ ರಾಷ್ಟಗಳ ಈ ನಡೆಯು ಭಾರತಕ್ಕೆ ಆತಂಕದ ವಿಚಾರವಾಗಿದೆ. ಪಾಕಿಸ್ಥಾನದೊಂದಿಗಿನ ವ್ಯಾಪಾರ ಮತ್ತು ಆರ್ಥಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ಉತ್ಸುಕವಾಗಿದೆ. ಹೀಗಾಗಿ, ಆ ದೇಶದ ಜನರಿಗೆ ವೀಸಾ ನೀಡುವ ಪ್ರಕ್ರಿಯೆ ಸರಳಗೊಳಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.

## ನಾನು ಟ್ರಂಪ್ ಸೋಲಿಸುತ್ತಿದ್ದೆ– ಅಧ್ಯಕ್ಷ ಜೋ ಬೈಡನ್



ಅಮೆರಿಕ: ಕಳೆದ ನವೆಂಬರ್ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ನಾನು ಡೊನಾಲ್ಡ್ ಟ್ರಂಪ್ ಅವರನ್ನು ಸೋಲಿಸುತ್ತಿದ್ದೆ ಎಂದು ನಿರ್ಗಮಿತ ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ. ಡೆಮಾಕ್ರಟಿಕ್ ಪಕ್ಷದ ಒಗ್ಗಟ್ಟನ್ನು ಕಾಪಾಡುವ ನಿಟ್ಟಿನಲ್ಲಿ ಸ್ಪರ್ಧೆಯಿಂದ ಅರ್ಧದಲ್ಲೇ ಹಿಂದೆ ಸರಿಯಲು ನಿರ್ಧರಿಸಿದೆ, ಕಮಲಾ ಹ್ಯಾರಿಸ್ ಕೂಡಾ ಟ್ರಂಪ್ ಅವರನ್ನ ಪರಾಜಯಗೊಳಿಸಬಹುದಿತ್ತು ಎಂದು ಭಾವಿಸುತ್ತೇನೆ ಎಂದು ಅವರು ಹೇಳಿಕೊಂಡಿದ್ದಾರೆ.

## ಲಾಸ್ ಏಂಜಲೀಸ್‌ನಲ್ಲಿ ಭೀಕರ ಕಾಡ್ಗಿಚ್ಚು



ಅಮೆರಿಕ: ಲಾಸ್ ಏಂಜಲೀಸ್‌ನಲ್ಲಿ ಕಾಣಿಸಿಕೊಂಡಿರುವ ಭೀಕರ ಕಾಡ್ಗಿಚ್ಚು ಹಾಲಿವುಡ್ ಬೆಟ್ಟಗಳಲ್ಲಿ ವೇಗವಾಗಿ ಹರಡುತ್ತಿದ್ದು, ಇಲ್ಲಿನ ಪ್ರಸಿದ್ಧ ಸ್ಥಳಗಳು, ಸೆಲೆಬ್ರಿಟಿಗಳ ಮನೆ ಮತ್ತಿತರ ಆಸ್ತಿಗಳೂ ಕೂಡ ಬೆಂಕಿಯ ಕೆನ್ನಾಲಿಗೆಗೆ ತುತ್ತಾಗಿವೆ. ಬೆಂಕಿ ವ್ಯಾಪಿಸುತ್ತಿರುವುದನ್ನು ನಿಯಂತ್ರಿಲು ಅಗ್ನಿಶಾಮಕದಳ ಸಿಬ್ಬಂದಿ ಹರಸಾಹಸಪಡುತ್ತಿದ್ದಾರೆ. ಇದುವರೆಗೆ ಐವರು ಸಾವನ್ನಪ್ಪಿದ್ದು, 1,30,000 ಜನರು ತಾವಿದ್ದ ಸ್ಥಳಗಳನ್ನು ತೊರೆದಿದ್ದಾರೆ.

## 2024 ಅತ್ಯಧಿಕ ತಾಪಮಾನದ ವರ್ಷ



ಬೆಲ್ಜಿಯಂ: 1850ರಲ್ಲಿ ಹವಾಮಾನ ಮಾಹಿತಿಯ ದಾಖಲೀಕರಣ ಆರಂಭವಾದ ನಂತರ 2024ನೇ ವರ್ಷವು ಜಾಗತಿಕವಾಗಿ ಅತ್ಯಂತ ಬಿಸಿಯಾದ ವರ್ಷವಾಗಿತ್ತು ಎಂದು ಯುರೋಪಿಯನ್ ಯೂನಿಯನ್ ಅನುದಾನ ದಡಿ ಕೆಲಸ ಮಾಡುವ ಕೋಪರ್ನಿಕಸ್ ಹವಾಮಾನ ಬದಲಾವಣೆ ಸೇವಾ ಸಂಸ್ಥೆ (ಸಿ3ಎಸ್) ಶುಕ್ರವಾರ ಹೇಳಿದೆ. ಹೀಗಾಗಿ ಹವಾಮಾನ ಬದಲಾವಣೆ ತಡೆಗೆ ತುರ್ತು ಜಾಗತಿಕ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದು ತಜ್ಞರು ಹೇಳಿದ್ದಾರೆ.

## ಚೊಚ್ಚಲ ಖೋ ಖೋ ವಿಶ್ವಕಪ್ ಆರಂಭ



ಹೊಸದಿಲ್ಲಿ: ಭಾರತದ ಆತಿಥ್ಯದ ಖೋ ಖೋ ವಿಶ್ವಕಪ್ ಮೊದಲ ಆವೃತ್ತಿಗೆ ಹೊಸದಿಲ್ಲಿಯ ಇಂದಿರಾಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಅದ್ದೂರಿ ಚಾಲನೆ ಲಭಿಸಿತು. ಜ. 19ರ ವರೆಗೆ ನಡೆಯುವ ಈ ಖೋ ಖೋ ವಿಶ್ವಕಪ್‌ನಲ್ಲಿ ಒಟ್ಟು 23 ದೇಶಗಳಿಂದ 20 ಪುರುಷರ, 19 ಮಹಿಳಾ ತಂಡಗಳು ಪಾಲ್ಗೊಳ್ಳುತ್ತಿವೆ. ಪ್ರತೀ ತಂಡಗಳಿಂದ ತಲಾ 9 ಆಟಗಾರರು ಆಡಳಿಯುತ್ತಾರೆ. 9+9 ನಿಮಿಷಗಳ 2 ಹಂತದಲ್ಲಿ ಪಂದ್ಯ ಸಾಗುತ್ತವೆ.

## ಬೆಳ್ಳಿ ಪದಕ ಗೆದ್ದ ಶ್ರೀಧರ್ ಹೊಸಮನಿ



ಹುಬ್ಬಳ್ಳಿ: ಯೋಗಾಸನದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ಹುಬ್ಬಳ್ಳಿ ತಾಲೂಕಿನ ಕುಸುಗಲ್ ಗ್ರಾಮದ ಅಂತಾರಾಷ್ಟ್ರೀಯ ಯೋಗಪಟು ಡಾ.ಶ್ರೀಧರ್ ಹೊಸಮನಿ ಮಹತ್ವದ ಸಾಧನೆ ಮಾಡಿದ್ದಾರೆ. ಥೈಲ್ಯಾಂಡ್ ದೇಶದಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗಾಸನ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಿ ಚಾಂಪಿಯನ್‌ಶಿಪ್‌ನಲ್ಲಿ ದ್ವಿತೀಯ ಸ್ಥಾನ ಪಡೆದು ದೇಶ ಹಾಗೂ ಹುಬ್ಬಳ್ಳಿ–ಧಾರವಾಡದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

## ಮುಡಾ ಹಗರಣ: ಅರ್ಜಿ ವಿಚಾರಣೆ ಮುಂದೂಡಿಕೆ



ಮೈಸೂರು : ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕೆಂದು ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಧಾರವಾಡ ಹೈಕೋರ್ಟ್ ಜ.27ಕ್ಕೆ ಮುಂದೂಡಿದೆ. ಸ್ನೇಹಮಯಿ ಕೃಷ್ಣ ಪರ ವಕೀಲ ಮಾತನಾಡಿ, "ಮುಡಾ ಹಗರಣ ಸಂಬಂಧ ಎರಡ್ಮೂರು ಬಾರಿ ವಿಚಾರಣೆ ನಡೆದಿತ್ತು. ಲೋಕಾಯುಕ್ತ ರಾಜ್ಯ ಸರ್ಕಾರದ ಕೈ ಗೊಂಬೆಯಂತೆ ಕೆಲಸ ಮಾಡುತ್ತಿದೆ. ಹೀಗಾಗಿ ನಾವು ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದೆವು" ಎಂದು ತಿಳಿಸಿದರು.

## ಸಂತ್ರಸ್ತ ಗೃಹ ಖರೀದಿದಾರರಿಗೆ ಇಲ್ಲ ರಿಲೀಫ್




ಬೆಂಗಳೂರು: ಅವಧಿ ಮೀರಿದರೂ ಅಪಾರ್ಟ್ಮೆಂಟ್ ನಿರ್ಮಾಣ ಪೂರ್ಣಗೊಳಿಸದ ಮತ್ತು ನಿಯಮ ಉಲ್ಲಂಘಿಸುವ ಬಿಲ್ಡರುಗಳ ವಿರುದ್ಧ ಕೆ–ರೇರಾ ದಂಡ ಪ್ರಯೋಗ ಮಾಡಿದರೂ ಯಾವುದೇ ಪ್ರಯೋಜನ ಆಗುತ್ತಿಲ್ಲ. ಇತ್ತ ಬಿಲ್ಡರ್‌ಗಳಿಂದ ದಂಡ ವಸೂಲಿಯೂ ಆಗುತ್ತಿಲ್ಲ, ಸಂತ್ರಸ್ತ ಗೃಹ ಖರೀದಿದಾರರಿಗೆ ನಿರೀಕ್ಷಿತ ಪರಿಹಾರವೂ ಸಿಗುತ್ತಿಲ್ಲ. ರಾಜ್ಯದ ಗೃಹ ಖರೀದಿದಾರರ ಹಿತ ಕಾಯ್ದುಕೊಳ್ಳುವ ಉದ್ದೇಶದಿಂದ ಕೆ–ರೇರಾ ಅಸ್ತಿತ್ವಕ್ಕೆ ಬಂದಿದೆ.

## ನಾನು ದಲಿತ, ನಾನೇಕೆ ಮುಖ್ಯಮಂತ್ರಿಯಾಗಬಾರದು?




ಹುಬ್ಬಳ್ಳಿ: ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿಗಾಗಿ ಕಿತ್ತಾಟ ಜೋರಾಗಿದ್ದು, ನಾಯಕರು ಬಹಿರಂಗವಾಗಿ ಹೇಳಿಕೆ ನೀಡುತ್ತಿದ್ದಾರೆ. ಎಲ್ಲರೂ ಶಿಸ್ತು ಅನುಸರಿಸಬೇಕು, ಯಾರೂ ಶಿಸ್ತು ಉಲ್ಲಂಘಿಸುವಂತಿಲ್ಲ ಎಂದು ಸುರ್ಜೇವಾಲಾ ಖಡಕ್ ಸೂಚನೆಯನ್ನು ಕೊಟ್ಟಿದ್ದರು. ಇಷ್ಟಾದರೂ ಸಚಿವ ಆರ್.ಬಿ. ತಿಮ್ಮಾಪುರ, ನಾನು ದಲಿತ, ನಾನೇಕೆ ಮುಖ್ಯಮಂತ್ರಿಯಾಗಬಾರದು? ಎಂದು ಸಿ.ಎಂ. ಆಗುವ ಇಂಗಿತ ವ್ಯಕ್ತಪಡಿಸಿದ್ದಾರೆ.

## 2025ರ ಮೊದಲ ಕೆಎಫ್‌ಡಿ ಪಾಸಿಟಿವ್ ಪ್ರಕರಣ ಪತ್ತೆ




ಶಿವಮೊಗ್ಗ: 2025ರ ಮೊದಲ ಮಂಗನ ಕಾಯಿಲೆಯ ಪಾಸಿಟಿವ್ ಪ್ರಕರಣ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನಲ್ಲಿ ಪತ್ತೆಯಾಗಿದೆ. ತೀರ್ಥಹಳ್ಳಿ ತಾಲೂಕಿನ ದೇವಂಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 63 ವರ್ಷದ ವೃದ್ಧರೊಬ್ಬರಲ್ಲಿ ಪಾಸಿಟಿವ್ ಕಂಡು ಬಂದಿದೆ. ಇವರಿಗೆ ಮೊದಲು ಜ್ವರ ಕಂಡು ಬಂದಿತ್ತು. ಇವರನ್ನು ದೇವಂಗಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಪಾಸಣೆ ನಡೆಸಿದಾಗ ಅನುಮಾನಗೊಂಡು, ಶಿವಮೊಗ್ಗದ ಕೆಎಫ್‌ಡಿ ಲ್ಯಾಬ್‌ನಲ್ಲಿ ತಪಾಸಣೆ ನಡೆಸಲಾಯಿತು. ಆಗ ಕೆಎಫ್‌ಡಿ ಸಾಬೀತಾಗಿದೆ.

## ತಲಾ 10 ಕೋಟಿ ರೂಪಾಯಿ ಅನುದಾನ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಹಲವು ಕೈ ಶಾಸಕರು ಅನುದಾನ ನೀಡದಿರುವ ಬಗ್ಗೆ ಅಸಮಾಧಾನ ಹೊರಹಾಕಿದರು. ಬಜೆಟ್ ಮಂಡನೆಗೂ ಮೊದಲು ಮತ್ತೊಮ್ಮೆ ಶಾಸಕಾಂಗ ಸಭೆ ಕರೆಯಲಾಗುವುದು. ಸರ್ಕಾರ ಸ್ಥಿರವಾಗಿದೆ, ಸಂಪನ್ಮೂಲ ಕ್ರೋಢೀಕರಣ ಆಗ್ತಿದೆ. ಅನುದಾನದ ವಿಚಾರ ಗಮನದಲ್ಲಿದೆ ಎಂದಿರುವ ಸಿಎಂ ಶಾಸಕರಿಗೆ ತಲಾ 10 ಕೋಟಿ ರೂ ಅನುದಾನ ನೀಡುವುದಾಗಿ ಅಭಯ ನೀಡಿದರು.

## ಪ್ರಕರಣ ಇತ್ಯರ್ಥಗೊಳಿಸಿ: ಅಧಿಕಾರಿಗಳಿಗೆ ಕಂದಾಯ ಸಚಿವರ ಗಡುವು



ಬೆಂಗಳೂರು: ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಅವಧಿ ಮೀರಿ ಬಾಕಿ ಇರುವ ಎಲ್ಲ ಪ್ರಕರಣಗಳನ್ನೂ ಮುಂದಿನ 6 ತಿಂಗಳೊಳಗಾಗಿ ನ್ಯಾಯಯುತ ಇತ್ಯರ್ಥಕ್ಕೆ ಒಳಪಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಎಲ್ಲಾ ಅಧಿಕಾರಿಗಳಿಗೆ ಸಮಯದ ಗಡುವನ್ನು ನೀಡಿದ್ದಾರೆ. 60 ಸಾವಿರ ಪ್ರಕರಣಗಳನ್ನು 1 ವರ್ಷದಲ್ಲಿ ಇತ್ಯರ್ಥಗೊಳಿಸಿ, ಸರ್ಕಾರಿ ಕಚೇರಿಗಳಿಗೆ ಜನರ ಅನಗತ್ಯ ಅಲೆದಾಟಕ್ಕೆ ಬ್ರೇಕ್ ಹಾಕಬೇಕು ಎಂದರು.

## ಸ್ಥಿರಾಸ್ತಿ ರಿಜಿಸ್ಟ್ರೇಷನ್ : ಕಂದಾಯ ಇಲಾಖೆ ಹೊಸ ಪ್ಲ್ಯಾನ್




ಬೆಂಗಳೂರು: ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಸ್ಥಿರಾಸ್ತಿ ದಸ್ತಾವೇಜುಗಳ ರಿಜಿಸ್ಟ್ರೇಷನ್ ಮಾಡುವ ಸಂದರ್ಭದಲ್ಲಿ ತಪ್ಪು ಮಾಹಿತಿ ನೀಡಿ ಆಗುತ್ತಿರುವ ಮೋಸಕ್ಕೆ ಕಡಿವಾಣ ಹಾಕಲು ಕಂದಾಯ ಇಲಾಖೆ ಹೊಸ ಪ್ಲಾನ್ ಮಾಡಲು ಮುಂದಾಗಿದೆ. ಶೀಘ್ರದಲ್ಲಿಯೇ ಜಿ.ಐ.ಎಸ್. ತಂತ್ರಾಂಶ ಸಿದ್ಧವಾಗಲಿದೆ. ಪ್ರಾಯೋಗಿಕವಾಗಿ ನೆಲಮಂಗಲ, ಹೊಸದುರ್ಗ ತಾಲೂಕುಗಳು ಹಾಗೂ ಕಲಬುರಗಿ ಮತ್ತು ಚಾಮರಾಜನಗರ ಜಿಲ್ಲೆಯ ತಲಾ ಒಂದು ತಾಲೂಕಿನಲ್ಲಿ ಇದನ್ನು ಜಾರಿಗೆ ತರಲಾಗುತ್ತದೆ.

## ಭಾರತದ ವಿರುದ್ಧ ಹೋರಾಡುತ್ತಿದ್ದೇವೆ : ರಾಹುಲ್ ಗಾಂಧಿ



ನವದೆಹಲಿ : ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತೊಂದು ವಿವಾದಿತ ಹೇಳಿಕೆ ನೀಡಿದ್ದು, ನಾವು ಬಿಜೆಪಿ, ಆರ್‌ಎಸ್‌ಎಸ್ ಜೊತೆಗೆ ದೇಶದ ವಿರುದ್ಧ ಹೋರಾಟ ನಡೆಸಬೇಕಿದೆ ಎಂದು ಹೇಳಿದ್ದಾರೆ. ಇದು ಕಾಂಗ್ರೆಸ್‌ನ ಕರಾಳ ಮುಖ ಎಂದು ಬಿಜೆಪಿ ಟೀಕಿಸಿದೆ. ದೇಶ ಎಲ್ಲರಿಗೂ ಒಂದೇ. ಅಂತಹ ದೇಶದ ವಿರುದ್ಧವೇ ರಾಹುಲ್ ಗಾಂಧಿ ಹೋರಾಡಲು ಕರೆ ನೀಡಿದ್ದಾರೆ. ಇದು ರಾಷ್ಟಕ್ಕೆ ಮಾಡಿದ ಅವಮಾನ ಎಂದು ಬಿಜೆಪಿ ಆರೋಪಿಸಿದೆ.

## ಧಾರ್ಮಿಕ ಕ್ಷೇತ್ರಗಳಿರುವ ನಗರಗಳಲ್ಲಿ ಮದ್ಯ ನಿಷೇಧ



ಮಧ್ಯಪ್ರದೇಶ : ಧಾರ್ಮಿಕ ಆರಾಧನೆಗಳಿಗೆ ಖ್ಯಾತಿಯಾಗಿರುವ, ಪವಿತ್ರ ಕ್ಷೇತ್ರಗಳನ್ನು ಹೊಂದಿರುವ ನಗರಗಳಲ್ಲಿ ಮದ್ಯ ಮಾರಾಟವನ್ನು ಸಂಪೂರ್ಣ ನಿಷೇಧ ಮಾಡುವ ಬಗ್ಗೆ ಸರ್ಕಾರ ಗಂಭೀರ ಚಿಂತನೆ ನಡೆಸಿದೆ ಎಂದು ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ತಿಳಿಸಿದ್ದಾರೆ. ಈ ಸ್ಥಳಗಳು ಹಿಂದೂ ಧರ್ಮೀಯರ ಪವಿತ್ರ ಕ್ಷೇತ್ರಗಳಾಗಿವೆ. ಹೀಗಾಗಿ, ಕ್ಷೇತ್ರ ಪಾವಿತ್ರ್ಯವನ್ನು ಕಾಪಾಡಲು ಮತ್ತು ಅವುಗಳನ್ನು ಉಳಿಸಿಕೊಂಡು ಹೋಗಲು ಮದ್ಯ ಮಾರಾಟ ನಿಷೇಧದ ಪ್ರಸ್ತಾಪ ಸರ್ಕಾರ ಮುಂದಿದೆ ಎಂದು ಹೇಳಿದರು.

## ಬ್ರಿಟಿಷ್ ನೌಕಾಪಡೆಯಿಂದ ಭಾರತೀಯ ಮೀನುಗಾರರ ಬಂಧನ



ಚೆನ್ನೈ: ತಮಿಳುನಾಡಿನ ತೋತೊರ್ ಗ್ರಾಮದ 10 ಮೀನುಗಾರರನ್ನು ಮಧ್ಯ ಹಿಂದೂ ಮಹಾಸಾಗರದ ಡಿಯಾಗೋ ಗಾರ್ಸಿಯಾ ದ್ವೀಪದ ಬಳಿ ಬ್ರಿಟಿಷ್ ನೌಕಾಪಡೆ ಬಂಧಿಸಿದೆ ಎಂದು ಆರೋಪಿಸಲಾಗಿದೆ. ಶ್ರೀಲಂಕಾ ನೌಕಾಪಡೆಯು ನಿರಂತರವಾಗಿ ಭಾರತೀಯ ಮೀನುಗಾರರನ್ನು ಬಂಧಿಸುತ್ತಿರುವ ಮಧ್ಯೆ ತಮಿಳುನಾಡಿನ ಕರಾವಳಿ ಸಮುದಾಯವು ಮತ್ತೊಂದು ಸಂಕಷ್ಟ ಎದುರಿಸುವಂತಾಗಿದೆ. ಟ್ಯೂನ ಮೀನು ಹಿಡಿಯಲು ತೆರಳಿದ್ದ ಮೀನುಗಾರರನ್ನು ಬ್ರಿಟಿಷ್ ನೌಕಾಪಡೆ ವಶಕ್ಕೆ ತೆಗೆದುಕೊಂಡಿದೆ.

## ಸ್ವಂತ ಬಲದ ಮೇಲೆ ಗೆಲ್ಲಲಾಗದ ಕಾಂಗ್ರೆಸ್ : ಶಿವಸೇನಾ




ಮಹಾರಾಷ್ಟ: ದೇಶದ ಹಲವಾರು ರಾಜ್ಯಗಳಲ್ಲಿ ಸ್ವಂತ ಬಲದ ಮೇಲೆ ಗೆಲ್ಲುವ ಶಕ್ತಿಯನ್ನು ಕಳೆದುಕೊಂಡಿರುವ ಕಾಂಗ್ರೆಸ್ ಪ್ರಾದೇಶಿಕ ಪಕ್ಷಗಳನ್ನು ಲಘುವಾಗಿ ಪರಿಗಣಿಸಬಾರದು ಎಂದು ಶಿವಸೇನಾ (ಯುಬಿಟಿ) ಹೇಳಿದೆ. ಐಎನ್‌ಡಿಐಎ ಮೈತ್ರಿಕೂಟ ಮತ್ತು ಮಹಾ ವಿಕಾಸ್ ಅಘಾಡಿ ಮೈತ್ರಿಕೂಟಗಳ ವಿಸರ್ಜನೆಯ ಬಗ್ಗೆ ಚರ್ಚೆಗಳು ನಡೆದಿರುವ ಮಧ್ಯೆ ಶಿವಸೇನಾ ತನ್ನ ಮುಖವಾಣಿ 'ಸಾಮ್ನಾ' ಸಂಪಾದಕೀಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕುಟುಕಿದೆ.

## ವಿಶ್ವದ ಪ್ರಮುಖ ಕಡಲ ಶಕ್ತಿಯಾಗುವತ್ತ ಭಾರತ ದಾಪುಗಾಲು



ಮುಂಬೈ : ಜಾಗತಿಕ ಭದ್ರತೆ, ಆರ್ಥಿಕತೆ ಮತ್ತು ಭೌಗೋಳಿಕ ರಾಜಕೀಯ ಚಲನಶೀಲತೆಯ ದಿಕ್ಕು ನಿರ್ಧರಿಸುವಲ್ಲಿ ಭಾರತವು ಪ್ರಮುಖ ಪಾತ್ರ ವಹಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಮೂರು ನೌಕಾ ಯುದ್ಧ ನೌಕೆಗಳನ್ನು ರಾಷ್ಟಕ್ಕೆ ಸಮರ್ಪಿಸಿ ಅವರು ಮಾತನಾಡಿದರು. ಇಂಡೋ–ಪೆಸಿಫಿಕ್ ಪ್ರದೇಶವು ಯಾವಾಗಲೂ ಮುಕ್ತ, ಸುರಕ್ಷಿತ, ಅಂತರ್ಗತ ಮತ್ತು ಸಮೃದ್ಧವಾಗಿರಬೇಕೆಂದು ಭಾರತ ಬಯಸುತ್ತದೆ, ಈ ಮೂರೂ ಯುದ್ಧ ನೌಕೆಗಳು 'ಮೇಡ್ ಇನ್ ಇಂಡಿಯಾ' ಆಗಿವೆ ಎಂದು ಮೋದಿ ಹೇಳಿದರು.

## ಕೇಜ್ರಿವಾಲ್ ವಿರುದ್ಧ ಇಡಿ ವಿಚಾರಣೆಗೆ ಕೇಂದ್ರ ಅಸ್ತು



ನವದೆಹಲಿ: ಅಬಕಾರಿ ನೀತಿಯಲ್ಲಿನ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮಾಜಿ ಸಿಎಂ, ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯ ವಿಚಾರಣೆಗೆ ಒಳಪಡಿಸಲು ಕೇಂದ್ರ ಗೃಹ ಸಚಿವಾಲಯ ಅನುಮತಿ ನೀಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೇಜ್ರಿವಾಲ್ ವಿರುದ್ಧ ಇಡಿ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿತ್ತು. ಇದೀಗ ದೆಹಲಿ ಚುನಾವಣೆ ಹೊತ್ತಲ್ಲಿ ಕೇಂದ್ರ ಗೃಹ ಸಚಿವಾಲಯವು ಕಾನೂನು ಪ್ರಕಾರ ಜಾರಿ ನಿರ್ದೇಶನಾಲಯಕ್ಕೆ ತನಿಖೆಗೆ ಒಪ್ಪಿಗೆ ನೀಡಿದೆ.

## ಭಾಗವತ್ ಸಂವಿಧಾನ ರಚನೆಕಾರರಲ್ಲ : ಸಂಜಯ್ ರಾವುತ್



ಮಹಾರಾಷ್ಟ : ಅಯೋಧ್ಯೆಯಲ್ಲಿ ರಾಮ ಮಂದಿರದ ನಿರ್ಮಾಣದ ಬಳಿಕ ಭಾರತಕ್ಕೆ ನಿಜವಾದ ಸ್ವಾತಂತ್ರ್ಯ ಸಿಕ್ಕಿತು ಎಂಬ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೇಳಿಕೆಗೆ ಉದ್ಧವ್ ಠಾಕ್ರೆ ಬಣದ ಶಿವಸೇನಾ ಸಂಸದ ಸಂಜಯ್ ರಾವುತ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥರು ಸಂವಿಧಾನದ ನಿರ್ಮಾತೃಗಳಲ್ಲ.

ಕರಾವಳಿ ತರಂಗಿಣಿ
# ಕಲಾ ತರಂಗಿಣಿ

## 'ರಾಜು ಜೇಮ್ಸ್ ಬಾಂಡ್' ಫೆ.14 ರಂದು ತೆರೆಗೆ

ಕರ್ಮ ಬ್ರೋಸ್ ಪ್ರೊಡಕ್ಷನ್ ಲಾಂಛನದಲ್ಲಿ ನಿರ್ಮಾಣವಾಗಿರುವ, ದೀಪಕ್ ಮಧುವನ ಹಳ್ಳಿ ನಿರ್ದೇಶನದಲ್ಲಿ "ಫಸ್ಟ್ ರ್‍ಯಾಂಕ್ ರಾಜು" ಖ್ಯಾತಿಯ ಗುರುನಂದನ್ ನಾಯಕರಾಗಿ ನಟಿಸಿರುವ "ರಾಜು ಜೇಮ್ಸ್ ಬಾಂಡ್" ಚಿತ್ರಕ್ಕಾಗಿ ಜ್ಯೋತಿ ವ್ಯಾಸರಾಜ್ ಬರೆದಿರುವ "ಕಣ್ಮಣಿ" ಎಂಬ ಹಾಡು ಇತ್ತೀಚೆಗೆ A2 ಮ್ಯೂಸಿಕ್ ಚಾನಲ್‌ನಲ್ಲಿ ಬಿಡುಗಡೆಯಾಗಿದೆ. ಅನೂಪ್ ಸೀಳಿನ್ ಸಂಗೀತ ನೀಡಿರುವ ಈ ಹಾಡನ್ನು ಖ್ಯಾತ ಗಾಯಕ ಸಂಜಿತ್ ಹೆಗ್ಡೆ ಹಾಡಿದ್ದಾರೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಅಣ್ಣವ್ರು ಅಭಿನಯಿಸಿದ್ದ ಜೇಮ್ಸ್ ಬಾಂಡ್ ಚಿತ್ರದ ಕಥೆಯೇ ಬೇರೆ. "ರಾಜು ಜೇಮ್ಸ್ ಬಾಂಡ್" ಚಿತ್ರದ ಕಥೆಯೇ ಬೇರೆ ಎಂದು ಮಾತನಾಡಿದ ನಿರ್ದೇಶಕ ದೀಪಕ್ ಮಧುವನ ಹಳ್ಳಿ, ಇಂದು ನಮ್ಮ ಚಿತ್ರದಿಂದ "ಕಣ್ಮಣಿ" ಎಂಬ ರೊಮ್ಯಾಂಟಿಕ್ ಸಾಂಗ್ ಬಿಡುಗಡೆಯಾಗಿದೆ. ಜ್ಯೋತಿ ವ್ಯಾಸರಾಜ್ ಅವರು ಬರೆದಿರುವ ಹಾಡನ್ನು ಸಂಜಿತ್ ಹೆಗ್ಡೆ ಅವರ ಧ್ವನಿಯಲ್ಲಿ ಕೇಳುವುದೇ ಚೆಂದ. ಅನೂಪ್ ಸೀಳಿನ್ ಅವರ ಸಂಗೀತ ಹಾಡಿನ ಶ್ರೀಮಂತಿಕೆಯನ್ನು ಮತ್ತಷ್ಟು ಹೆಚ್ಚಿಸಿದೆ. ಮುರಳಿ ಮಾಸ್ಟರ್ ಈ ಮನಮೋಹಕ ಹಾಡಿಗೆ ನೃತ್ಯ ಸಂಯೋಜನೆ ಮಾಡಿದ್ದಾರೆ. ಗುರುನಂದನ್ ಹಾಗೂ ಮೃದುಲ ಲಂಡನ್ ಸುತ್ತಮುತ್ತಲಿನ ಸುಂದರ ಪರಿಸರದಲ್ಲಿ ಚಿತ್ರೀಕರಣವಾಗಿರುವ ಈ ಗೀತೆಯಲ್ಲಿ ಅಭಿನಯಿಸಿದ್ದಾರೆ ಎಂದರು. ಇಂದು ನಮ್ಮ ಚಿತ್ರದ "ಕಣ್ಮಣಿ" ಹಾಡು ಬಿಡುಗಡೆಯಾಗಿದೆ. ಈ ಹಾಡಿನಲ್ಲಿ ನಾನು ಚೆನ್ನಾಗಿ ನೃತ್ಯ ಮಾಡಿದ್ದೀನಿ ಅಂದರೆ ಅದಕ್ಕೆ ಮುರಳಿ ಮಾಸ್ಟರ್ ಕಾರಣ. ಅವರಿಗೆ ನನ್ನ ಕಡೆಯಿಂದ ಧನ್ಯವಾದ. ನಮ್ಮ ಚಿತ್ರ ಡಿಸೆಂಬರ್ ಕೊನೆಯಲ್ಲೇ ಬಿಡುಗಡೆಯಾಗಬೇಕಿತ್ತು. ಆದರೆ ಎರಡು ದೊಡ್ಡ ಚಿತ್ರಗಳು ಅದೇ ಸಮಯಕ್ಕೆ ಬಿಡುಗಡೆಯಾದ್ದುದ್ದರಿಂದ ನಮ್ಮ ಚಿತ್ರದ ಬಿಡುಗಡೆ ಸ್ವಲ್ಪ ಮುಂದೆ ಹೋಯಿತು. ಫೆಬ್ರವರಿ 14 ನಮ್ಮ ಚಿತ್ರ ಬಿಡುಗಡೆಯಾಗಲಿದೆ ನೋಡಿ ಹಾರೈಸಿ ಎಂದರು ನಾಯಕ ಗುರುನಂದನ್. ನಮ್ಮ ಚಿತ್ರ ಫೆಬ್ರವರಿ 14ರಂದು ಕನ್ನಡ ಹಾಗೂ ಹಿಂದಿ ಭಾಷೆಗಳಲ್ಲಿ ಏಕಕಾಲಕ್ಕೆ ಬಿಡುಗಡೆಯಾಗುತ್ತಿದೆ. ಇಂದು ಬಿಡುಗಡೆಯಾಗಿರುವ ಹಾಡು ಲಂಡನ್‌ನ ಸುಂದರ ಪರಿಸರದಲ್ಲಿ ಚಿತ್ರೀಕರಣವಾಗಿದೆ. ಫೆಬ್ರವರಿ 14ರಂದು ನಮ್ಮ ಚಿತ್ರ ಕರ್ನಾಟಕದಲ್ಲಿ ಸತ್ಯ ಪಿಕ್ಚರ್ಸ್ ಮೂಲಕ ಬಿಡುಗಡೆಯಾಗುತ್ತಿದೆ ಎಂದರು ನಿರ್ಮಾಪಕರಾದ ಮಂಜುನಾಥ್ ವಿಶ್ವಕರ್ಮ ಹಾಗೂ ಕಿರಣ್ ಭರ್ತೂರು. ನಾಯಕಿ ಮೃದುಲ, ನೃತ್ಯ ನಿರ್ದೇಶಕ ಮುರಳಿ ಹಾಗೂ ವಿತರಕ ಸತ್ಯಪ್ರಕಾಶ್ "ಕಣ್ಮಣಿ" ಹಾಡು ಹಾಗೂ ಚಿತ್ರದ ಬಗ್ಗೆ ಮಾತನಾಡಿದರು.



## 'ಅಪಾಯವಿದೆ ಎಚ್ಚರಿಕೆ' ಚಿತ್ರದ ಚುರುಕು ನೋಟವೇ ಲವ್ ಸಾಂಗ್

ಈ ಹಿಂದೆ ಮೋಶನ್ ಪೋಸ್ಟರ್ ಮತ್ತು ಬ್ಯಾಚುಲರ್ ಸಾಂಗ್ ಬಿಡುಗಡೆ ಮಾಡಿದ ಅಪಾಯವಿದೆ ಎಚ್ಚರಿಕೆ ಚಿತ್ರತಂಡ ನಂತರ ಚಿತ್ರದ ಟೀಸರ್ ಬಿಡುಗಡೆಗೊಳಿಸಿ ಅದರ ವಿಶೇಷತೆಯಿಂದ ನಿರೀಕ್ಷೆ ಹುಟ್ಟಿಸಿತ್ತು. ಪ್ರಾರಂಭದಿಂದಲೂ ಹೊಸತನದ ಕಂಟೆಂಟ್ ಜೊತೆ ಕಾಣಿಸಿ ಕೊಳ್ಳುತ್ತಿದ್ದ ಅಭಿಜಿತ್ ತೀರ್ಥಹಳ್ಳಿ ನಿರ್ದೇಶನ ಅಪಾಯವಿದೆ ಚಿತ್ರದಲ್ಲಿ ಇದೀಗ ಹೊಸ ಹಾಡೊಂದು ಬಿಡುಗಡೆಯಾಗಿದೆ. ಚುರುಕು ನೋಟವೇ ಸುಳಿವು ನೀಡಿದೆ ಎನ್ನುವಂತ ಸುಂದರ ಸಾಲುಗಳೊಂದಿಗೆ ಶುರುವಾಗೋ ಈ ಹಾಡಿನ ಸಾಹಿತ್ಯವನ್ನು ಸ್ವತಃ ನಿರ್ದೇಶಕ ಅಭಿಜಿತ್ ತೀರ್ಥಹಳ್ಳಿಯವರೇ ಬರೆದಿರುವುದು ವಿಶೇಷ. ತುಂಬಾ ಅಪರೂಪದ ಪದಬಳಕೆ ಮೂಲಕ ಸಾಹಿತ್ಯದಲ್ಲೂ ತನ್ನ ಕೈಚಳಕ ತೋರಿರುವ ನಿರ್ದೇಶಕ ಅಭಿಜಿತ್ ತೀರ್ಥಹಳ್ಳಿಗೆ ಸಂಗೀತದಲ್ಲಿ ಸಾಥ್ ನೀಡಿದ್ದಾರೆ ಸುನಾದ್ ಗೌತಮ್. ಅನಂತು ವರ್ಸಸ್ ನುಸ್ರತ್ ಚಿತ್ರದ 'ಈಗ ತಾನೇ ಜಾರಿಯಾಗಿದೆ', ಮತ್ತು ಜೊತೆಜೊತೆಯಲಿ ಧಾರಾವಾಹಿಯ 'ನೂರು ಜನ್ಮ ಕೂಡಿ ಬಾಳುವ' ದಂತಹ ಹಿಟ್ ಹಾಡುಗಳನ್ನು ಕೊಟ್ಟ ಸುನಾದ್ ಗೌತಮ್ ಈಗ ಹೊಸ ಮೆಲೋಡಿ ನೀಡುವುದರ ಜೊತೆಗೆ ಕೇಳುಗನಿಗೆ ಹೊಸ ಇಂಪನ್ನು ಉಣಬಡಿಸಲು ಸಜ್ಜಾಗಿದ್ದಾರೆ. ಸರಿಗಮಪ ಖ್ಯಾತಿಯ ರಜತ್ ಹೆಗ್ಡೆ ಚುರುಕು ನೋಟವೇ ಹಾಡಿಗೆ ಧ್ವನಿಯಾಗಿದ್ದು ತನ್ನ ಕಂಠದಿಂದಲೇ ಮೋಡಿ ಮಾಡಿದ್ದಾರೆ. ಒಟ್ಟಾರೆ ಮನಸಿಗೆ ಮುದ ನೀಡಿ ಕಾಡುವಂತಹ ಹೊಸ ಗೀತೆಯೊಂದು ಕನ್ನಡ ಚಿತ್ರರಂಗದಲ್ಲಿ ತನ್ನ ಮೆಲೋಡಿ ಟಚ್ ನಿಂದ ಸದ್ದು ಮಾಡುತ್ತಿದೆ. ಸಸ್ಪೆನ್ಸ್ ಹಾರರ್ ಥ್ರಿಲ್ಲರ್ ಜಾನರ್ ಹೊಂದಿರುವ ಅಪಾಯವಿದೆ ಎಚ್ಚರಿಕೆ ಚಿತ್ರ ಇದೆ ಫೆಬ್ರವರಿಯಲ್ಲಿ ತೆರೆ ಕಾಣಲು ಸಜ್ಜಾಗಿದೆ. ಚಿತ್ರಕ್ಕೆ ವಿ. ಜಿ. ಮಂಜುನಾಥ್ ಮತ್ತು ಪೂರ್ಣಿಮಾ ಎಂ. ಗೌಡ ಬಂಡವಾಳ ಹೂಡಿದ್ದಾರೆ. ಚಿತ್ರದ ಚುರುಕು ನೋಟವೇ ಸಾಂಗ್‌ನಲ್ಲಿ ಅಣ್ಣಯ್ಯ ಖ್ಯಾತಿಯ ನಾಯಕ ವಿಕಾಶ್ ಉತ್ತಯ್ಯ ಮತ್ತು ನಾಯಕಿ ರಾಧಾ ಭಗವತಿ ತುಂಬಾ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಇಬ್ಬರ ನಡುವಿನ ಕಚಗುಳಿ ಇಡುವಂತಹ ಲವ್ ದೃಶ್ಯಗಳನ್ನು ಅದ್ಭುತವಾಗಿ ಚಿತ್ರಿಸಿದ್ದಾರೆ ನಿರ್ದೇಶಕ ಅಭಿಜಿತ್ ತೀರ್ಥಹಳ್ಳಿ. ಈ ಹಾಡಿನ ಲಿರಿಕಲ್ ವಿಡಿಯೋ ಈಗಾಗಲೇ ಆನಂದ್ ಯುಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿ ಸದ್ದು ಮಾಡುತ್ತಿದೆ.



## ಕಿತ್ತೋದ ಪ್ರೇಮ ಹಾಡು ರಿಲೀಸ್

ಕನ್ನಡದ ಹೆಸರಾಂತ ನಿರ್ದೇಶಕ ಗುರುಪ್ರಸಾದ್ ಅವರ ಕೊನೆ ಕನಸು ಎದ್ದೇಳು ಮಂಜುನಾಥ 2 ಬಿಡುಗಡೆಗೆ ಸಿದ್ಧವಾಗಿದೆ. 2009ರಲ್ಲಿ ತೆರೆಕಂಡ 'ಎದ್ದೇಳು ಮಂಜುನಾಥ' ಸಿನಿಮಾದಲ್ಲಿ ನವರಸ ನಾಯಕ ಜಗ್ಗೇಶ್ ನಾಯಕನಾಗಿ ಅಭಿನಯಿಸಿ ಮೋಡಿ ಮಾಡಿದ್ದರು. ಈಗ ಎದ್ದೇಳು ಮಂಜುನಾಥ್-2ಗೆ ಗುರುಪ್ರಸಾದ್ ಅವರೇ ಕಥೆ ಬರೆದು ನಿರ್ದೇಶನದ ಜೊತೆ ನಾಯಕನಾಗಿಯೂ ನಟಿಸಿದ್ದಾರೆ. ಈ ಚಿತ್ರದ ಕಿತ್ತೋದ ಪ್ರೇಮ ಹಾಡು ಬಿಡುಗಡೆ ಕಾರ್ಯಕ್ರಮ ನಿನ್ನೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆಯಿತು. ಈ ವೇಳೆ ನಿರ್ದೇಶಕರಾದ ಸಿಂಪಲ್ ಸುನಿ, ನಿರ್ಮಾಪಕ ಉದಯ್ ಕೆ ಮೆಹ್ತಾ ಎದ್ದೇಳು ಮಂಜುನಾಥ್-2ಗೆ ಶುಭ ಹಾರೈಸಿದರು. ಬಳಿಕ ಹಿರಿಯ ಕಲಾವಿದರಾದ ಶರತ್ ಲೋಹಿತಾಶ್ವ ಮಾತನಾಡಿ,ಗುರುಪ್ರಸಾದ್ ಇದ್ದಿದ್ದರೆ ಈ ಆಡಿಟೋರಿಯಂನಲ್ಲಿ ನಗು, ಅವರ ಓಡಾಟ, ಅಬ್ಬರ ಎಲ್ಲಾ ಇರುತಿತ್ತೇನೋ? ನಾವು ಇಂದು ಅದೆಲ್ಲವನ್ನೂ ಮಿಸ್ ಮಾಡಿಕೊಳ್ಳುತ್ತಿದ್ದೇವೆ. ನಾನು ಅವರನ್ನು ಅಭಿಮಾನಿಯಾಗಿ ನೋಡಿದ್ದೆ. ಅವರ ಚಿತ್ರಗಳಲ್ಲಿ ಅಭಿನಯಿಸುವ ಅವಕಾಶ ಸಿಕ್ಕಿಲ್ಲ. ನಾನು ಹಿಂದೆ ಹಲವು ಬಾರಿ ಹೇಳಿದ್ದೇನೆ. ನಮ್ಮ ತಂದೆ ಮತ, ಎದ್ದೇಳು ಮಂಜುನಾಥ್ ಸಿನಿಮಾವನ್ನು ಟಿವಿಯಲ್ಲಿ ಬಂದಾಗೆಲ್ಲಾ ನಗು, ನಗುತ್ತಾ ಎಂಜಾಯ್ ಮಾಡುತ್ತಿದ್ದರು. ನಾನು ಅಪ್ಪನ ಜೊತೆ ಆ ಚಿತ್ರ ನೋಡಿ ಎಂಜಾಯ್ ಮಾಡಿದ್ದೇನೆ. ಪ್ರತಿಯೊಬ್ಬ ಕಲಾವಿದರಿಗೂ ಒಬ್ಬ ಒಳ್ಳೆ ನಿರ್ದೇಶಕರ ಜೊತೆ ಕೆಲಸ ಮಾಡಬೇಕು ಎಂಬ ಆಸೆ ಇರುತ್ತದೆ. ಆ ಆಸೆ ನನಗೂ ಇತ್ತು. ಆ ಆಸೆ ಗುರುಪ್ರಸಾದ್ ಅವರ ಕೊನೆಯ ಚಿತ್ರದಲ್ಲಿ ಈಡೇರಿದೆ ಎಂದರು. ನಾಯಕಿ ರಚಿತಾ ಮಹಾಲಕ್ಷ್ಮಿ ಮಾತನಾಡಿ, ಇಲ್ಲಿಗೆ ಬಂದಾಗ ಸ್ವಲ್ಪ ಫೀಲಿಂಗ್ ಆಯ್ತು. ರಂಗನಾಯಕ ಸಿನಿಮಾ ಸಮಯದಲ್ಲಿ ಗುರುಪ್ರಸಾದ್ ಸರ್ ಬನ್ನಿ ಕುತ್ಕೊಳ್ಳಿ ಅಂತೆಲ್ಲಾ ಆತಿಥ್ಯ ಮಾಡಿದ್ದು ನೆನಪಾಯ್ತು. ಆ ವ್ಯಕ್ತಿಯನ್ನು ಈ ರೀತಿ ನೋಡಿದ್ದು ಬೇಸರವಾಗುತ್ತಿದೆ. ನಾನು ರಂಗನಾಯಕ ಸಿನಿಮಾಗೂ ಮೊದಲು ಸೈನ್ ಮಾಡಿದ್ದು ಎದ್ದೇಳು ಮಂಜುನಾಥ-2 ಸಿನಿಮಾಗೆ. 2020ನಲ್ಲಿ ಈ ಸಿನಿಮಾದ ಚಿತ್ರೀಕರಣ ಮಾಡಿದ್ದು, ಗುರುಪ್ರಸಾದ್ ಅವರ ನಿರ್ದೇಶನದಲ್ಲಿ ಕೆಲಸ ಮಾಡಿರುವುದು ಖುಷಿ ಕೊಟ್ಟಿದೆ ಎಂದರು.



## ರಾ ಅಂಡ್ ರಗಡ್ ಆದ ಪೃಥ್ವಿ... ಚೌಕಿದಾರ್ ಮಾಸ್ ಟೀಸರ್ ರಿಲೀಸ್

ಕ್ಲಾಸ್ ಸಿನಿಮಾಗಳ ಮೂಲಕ ಲವರ್ ಬಾಯ್ ಆಗಿ ಕಾಣಿಸಿಕೊಳ್ಳುತ್ತಿದ್ದ ಪೃಥ್ವಿ ಅಂಬರ್ ಮೊದಲ ಬಾರಿಗೆ ರಗಡ್ ಗೆಟಪ್ ನಲ್ಲಿ ಕಾಣಿಸಿಕೊಂಡಿದ್ದಾರೆ. ರೋಸ್ ಹಿಡಿಯುತ್ತಿದ್ದ ಪೃಥ್ವಿ ಕೈಗೆ ಲಾಂಗ್ ಕೊಟ್ಟು ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ರಕ್ತಹರಿಸಿದ್ದಾರೆ. ಸಂಕ್ರಾಂತಿ ಹಬ್ಬದ ವಿಶೇಷವಾಗಿ ಚೌಕಿದಾರ್ ಸಿನಿಮಾದ ಟೀಸರ್ ಅನಾವರಣಗೊಂಡಿದೆ. ಹಿಂದೆಂದೂ ಕಾಣದ ಲುಕ್‌ನಲ್ಲಿ ಪೃಥ್ವಿ ಪ್ರತ್ಯಕ್ಷರಾಗಿದ್ದಾರೆ. ರಕ್ತಸಿಕ್ತ ಅವತಾರವೆತ್ತಿರುವ ಅವರ ಹೊಸ ಲುಕ್ ಸಿನಿರಸಿಕರಿಗೆ ಕಿಕ್ ಕೊಟ್ಟಿದೆ. ಟೀಸರ್ ನಲ್ಲಿ ಎಲ್ಲಾ ಪಾತ್ರಗಳನ್ನು ತೋರಿಸಿರುವ ಚಂದ್ರಶೇಖರ್ ಬಂಡಿಯಪ್ಪ ಕಥೆಯ ಗುಟ್ಟನ್ನು ಎಲ್ಲಿಯೂ ಬಿಟ್ಟುಕೊಟ್ಟಿಲ್ಲ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಟೀಸರ್ ಬಿಡುಗಡೆ ಮಾಡಲಾಗಿದ್ದು, ಖಾಕಿ ಲುಕ್‌ನಲ್ಲಿ ಸುಧಾರಾಣಿ ಖದರ್ ತೋರಿಸಿದ್ದಾರೆ. ಹಿರಿಯ ನಟ ಸಾಯಿ ಕುಮಾರ್ ಪೃಥ್ವಿ ತಂದೆ ಪಾತ್ರದಲ್ಲಿ ಗಮನಸೆಳೆಯುತ್ತಾರೆ. ಧರ್ಮ, ಹಿರಿಯ ನಟಿ ಶ್ವೇತಾ ತಾರಾ ಬಳಗದಲ್ಲಿದ್ದಾರೆ. ಪೃಥ್ವಿ ಅಂಬರ್‌ಗೆ ಜೋಡಿ ಯಾಗಿ ಅಭಿನಯಿಸಿರುವ ಧನ್ಯ ರಾಮ್ ಕುಮಾರ್ ಡಿ. ಗ್ಲಾಮರ್ ಆಗಿ ಕಾಣಿಸಿಕೊಂಡಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ಟೀಸರ್ ನಲ್ಲಿ ಗಮನಸೆಳೆಯುತ್ತಿದೆ. ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ. ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಡುತ್ತಿದ್ದಾರೆ. ವಿ. ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ, ಸಂತೋಷ್ ನಾಯಕ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಸಿದ್ದು ಕಂಚನಹಳ್ಳಿ ಛಾಯಾಗ್ರಹಣ, ರವಿ ವರ್ಮಾ ಸಾಹಸ ನಿರ್ದೇಶನ ಸಿನಿಮಾಗಿದೆ. 'ಚೌಕಿದಾರ್' ಬಹುಭಾಷೆಯಲ್ಲಿ ಮೂಡಿ ಬರುತ್ತಿದ್ದು, ಪೃಥ್ವಿರಾಜ್ ಧಘಾರಿ ಸಹ ನಿರ್ದೇಶನದಲ್ಲಿ ಚಿತ್ರ ತಯಾರಾಗಿದೆ. ಮೇ ತಿಂಗಳಲ್ಲಿ ಚೌಕಿದಾರ್ ತೆರೆಗೆ ತರಲು ಚಿತ್ರತಂಡ ಯೋಜನೆ ಹಾಕಿಕೊಂಡಿದೆ. ಟೀಸರ್ ನೋಡುತ್ತಿದ್ದರೇ ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ಯಾವುದೋ ಹೊಸ ಕಥೆಯನ್ನು ಹರವಿಡಲು ಹೊರಟಿರುವುದು ಗೊತ್ತಾಗುತ್ತಿದೆ.



## 'ಗರಿವಿಡಿ ಲಕ್ಷ್ಮೀ' ಮೊದಲ ಹಾಡು ಬಿಡುಗಡೆ

ತೆಲುಗಿನ ಖ್ಯಾತ ನಟ ಆನಂದಿ ಮುಖ್ಯ ಭೂಮಿಕೆಯಲ್ಲಿ ನಟಿಸಿರುವ "ಗರಿವಿಡಿ ಲಕ್ಷ್ಮೀ" ಸಿನಿಮಾ ಇದೀಗ ಹೊಸ ಅಪ್‌ಡೇಟ್ ಜತೆಗೆ ಆಗಮಿಸಿದೆ. ಖ್ಯಾತ ಚಿತ್ರನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾ ಫ್ಯಾಕ್ಟರಿ "ಗರಿವಿಡಿ ಲಕ್ಷ್ಮೀ" ಸಿನಿಮಾ ನಿರ್ಮಾಣ ಮಾಡುತ್ತಿದ್ದು, ಇದೀಗ ಇದೇ ಚಿತ್ರದ ಉತ್ತರ ಆಂಧ್ರ ಭಾಷಾ ಸೊಗಡಿನ "ನಳ ಜಿಲಕರ ಮೊಗ್ಗ" ಹಾಡು ಬಿಡುಗಡೆ ಆಗಿದೆ. ಗೌರಿ ನಾಯ್ಡು ಜಮ್ಮು ಎಂಬ ನಿರ್ದೇಶಕರು ಈ ಸಿನಿಮಾ ಮೂಲಕ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. ಟಿಜಿ ವಿಶ್ವ ಪ್ರಸಾದ್ ಮತ್ತು ಟಿಜಿ ಕೃತಿ ಪ್ರಸಾದ್ ಜಂಟಿಯಾಗಿ ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ಅಡಿಯಲ್ಲಿ ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಈ ಚಿತ್ರಕ್ಕೆ ಚರಣ್ ಅರ್ಜುನ್ ಸಂಗೀತ ಸಂಯೋಜಿಸುತ್ತಿದ್ದಾರೆ. ಈ ಹಾಡನ್ನು ಕನ್ನಡದ ಜನಪ್ರಿಯ ಗಾಯಕಿ ಅನನ್ಯ ಭಟ್ ಹಾಡಿದ್ದಾರೆ. ಸದ್ಯ ಬಿಡುಗಡೆ ಆಗಿರುವ ಹಾಡಿಗೆ ಒಳ್ಳೆಯ ಪ್ರತಿಕ್ರಿಯೆ ಸಿಗುತ್ತಿದ್ದು, ಚಿತ್ರದ ಚಿತ್ರೀಕರಣ ಆಂಧ್ರಪ್ರದೇಶದ ಅಡೋನಿಯಲ್ಲಿ ಶೀಘ್ರದಲ್ಲೇ ಪ್ರಾರಂಭವಾಗಲಿದೆ. ಇದೀಗ 1990 ಕಾಲಘಟ್ಟ ಜಾನಪದ ಶೈಲಿಯ ಹಾಡಿನ ಮೂಲಕ ಕೇಳುಗರನ್ನು ಆಕರ್ಷಿಸಿರುವ ಗರಿವಿಡಿ ಲಕ್ಷ್ಮೀ ಸಿನಿಮಾದಲ್ಲಿ, ಉತ್ತರ ಆಂಧ್ರ ಭಾಗದ ಸಂಸ್ಕೃತಿ, ಆಚಾರ ವಿಚಾರದ ಜತೆಗೆ ಕಥಾ ಕಲಾವಿದರನ್ನೂ ಈ ಹಾಡಿನಲ್ಲಿ ಬಳಸಿಕೊಳ್ಳಲಾಗಿದೆ. ಚರಣ್ ಅರ್ಜುನ್ ಅವರ ಸಂಗೀತದೊಂದಿಗೆ, ಉತ್ತರ ಆಂಧ್ರದ ಸಾರ, ಅಲ್ಲಿನ ದೃಶ್ಯ ಮತ್ತು ಧ್ವನಿಯ ಮೂಲಕ ಕೇಳುಗರ ಕಿವಿಗೆ ಇಂಪಾಗಿಸಿದ್ದಾರೆ.



## ಡೈನಾಮಿಕ್ ಪ್ರಿನ್ಸ್ ಪ್ರಜ್ವಲ್ ದೇವರಾಜ್ ಅಭಿನಯದ "ಗಣ" ತೆರೆಗೆ

ದೇಶದೆಲ್ಲೆಡೆ ಜನವರಿ 26 ಗಣರಾಜ್ಯೋತ್ಸವದ ಸಂಭ್ರಮ. ಇದೇ ಸಂಭ್ರಮದ ಹೊಸ್ತಿಲಲ್ಲಿ ಅಂದರೆ ಜನವರಿ 31ರಂದು ಡೈನಾಮಿಕ್ ಪ್ರಿನ್ಸ್ ಪ್ರಜ್ವಲ್ ದೇವರಾಜ್ ನಾಯಕರಾಗಿ ನಟಿಸಿರುವ "ಗಣ" ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ವಿಭಿನ್ನ ಕಂಟೆಂಟ್ ಹೊಂದಿರುವ ಈ ಚಿತ್ರ ಈಗಾಗಲೇ ಟೀಸರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿದೆ. ಚೆರಿ ಕ್ರಿಯೇಷನ್ಸ್ ಲಾಂಛನದಲ್ಲಿ ಪಾರ್ಥು ಅವರು ನಿರ್ಮಿಸಿರುವ ಈ ಚಿತ್ರವನ್ನು ಹರಿಪ್ರಸಾದ್ ಜಕ್ಕ ನಿರ್ದೇಶಿಸಿದ್ದಾರೆ. ಜೈ ಆನಂದ್ ಛಾಯಾಗ್ರಹಣ, ಅನೂಪ್ ಸೀಳಿನ್ ಸಂಗೀತ ನಿರ್ದೇಶನ, ಹರೀಶ್ ಕೊಮ್ಮೆ ಸಂಕಲನ, ಸತೀಶ್ ಎ. ಕಲಾ ನಿರ್ದೇಶನ ಹಾಗೂ ಡಿ.ಜೆ ಕ್ರಿಯೇಟಿವ್ ಪ್ರೊಡ್ಯೂಸರ್ ಆಗಿ ಕಾರ್ಯನಿರ್ವಹಿಸಿದ್ದಾರೆ. ಚಿಕ್ಕಬಳ್ಳಾಪುರ ಶ್ರೀನಿವಾಸ್ ಕಾರ್ಯಕಾರಿ ನಿರ್ವಾಪಕರು. ಪ್ರಜ್ವಲ್ ದೇವರಾಜ್, ಯಶಾ ಶಿವಕುಮಾರ್, ವೇದಿಕಾ ಕುಮಾರ್, ಕೃಷಿ ತಾಪಂಡ, ವಿಶಾಲ್ ಹೆಗಡೆ, ರವಿ ಕಾಳೆ, ಸಂಪತ್‌ರಾಜ್, ಶಿವರಾಜ್ ಕೆ.ಆರ್ ಪೇಟೆ, ರಮೇಶ್ ಭಟ್ "ಗಣ" ಚಿತ್ರದ ತಾರಾಬಳಗದಲ್ಲಿದ್ದಾರೆ.



## 'ರುದ್ರ ಗರುಡ ಪುರಾಣ' ಚಿತ ಜ.24ರಂದು ತೆರೆಗೆ

2025ರ ಬಹು ನಿರೀಕ್ಷಿತ ಚಿತ್ರಗಳಲ್ಲಿ ಒಂದಾದ, ಟೀಸರ್ ಮೂಲಕ ಈಗಾಗಲೇ ಸಾಕಷ್ಟು ನಿರೀಕ್ಷೆ ಹುಟ್ಟಿಸಿರುವ ರಿಷಿ ನಾಯಕನಾಗಿ ನಟಿಸಿರುವ 'ರುದ್ರ ಗರುಡ ಪುರಾಣ' ಚಿತ್ರಕ್ಕಾಗಿ ಪ್ರಮೋದ್ ಮರವಂತೆ ಬರೆದಿರುವ "ಅದೇನೇನೋ ಖುಷಿ ತಂದೆ, ಅದೇನೇನೋ ನಶೇ ತಂದೆ" ಎಂಬ ಹಾಡು ಇತ್ತೀಚಿಗೆ ಬಿಡುಗಡೆಯಾಗಿದೆ. ಕೃಷ್ಣಪ್ರಸಾದ್ ಸಂಗೀತ ನೀಡಿರುವ ಈ ಹಾಡನ್ನು ತಮ್ಮ ಅಮೋಘ ಗಾಯನದ ಮೂಲಕ ಹೆಸರಾಗಿರುವ ಸಂಜಿತ್ ಹೆಗ್ಡೆ ಹಾಗೂ ದೀಪಿಕಾ ವರದರಾಜನ್ ಹಾಡಿದ್ದಾರೆ. ಈಗಾಗಲೇ ಹಾಡುಗಳು ಹಾಗೂ ಟೀಸರ್ ಮೂಲಕ ಮೆಚ್ಚುಗೆ ಪಡೆದುಕೊಂಡಿರುವ ಈ ಚಿತ್ರ ಜನವರಿ 24ರಂದು ತೆರೆಕಾಣಲಿದೆ. ಮಿಸ್ಟಿ ಥ್ರಿಲ್ಲರ್ ಕಥಾಹಂದರ ಹೊಂದಿರುವ "ರುದ್ರ ಗರುಡ ಪುರಾಣ"ದಲ್ಲಿ ಪ್ರೇಮ ಕಥೆಯೂ ಇದೆ. ಹೆಸರಾಂತ ನಿರ್ದೇಶಕ ಜೇಕಬ್ ವರ್ಗೀಸ್ ಅವರ ಬಳಿ ಸಹ ನಿರ್ದೇಶಕರಾಗಿ ಕಾರ್ಯ ನಿರ್ವಹಿಸಿರುವ ನಂದೀಶ್ ನಿರ್ದೇಶನದ ಎರಡನೇ ಚಿತ್ರ 'ರುದ್ರ ಗರುಡ ಪುರಾಣ. ಅಶ್ವಿನಿ ಆರ್ಟ್ಸ್ ಲಾಂಛನದಲ್ಲಿ ಅಶ್ವಿನಿ ವಿಜಯ್ ಲೋಹಿತ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ರಿಷಿ ಅವರಿಗೆ ನಾಯಕಿಯಾಗಿ ಪ್ರಿಯಾಂಕ ನಟಿಸಿದ್ದಾರೆ. ವಿನೋದ್ ಆಳ್ವಾ, ಅವಿನಾಶ್, ಶಿವರಾಜ್ ಕೆ.ಆರ್ ಪೇಟೆ, ಗಿರೀಶ್ ಶಿವಣ್ಣ ಮುಂತಾದವರು ಪ್ರಮುಖ ತಾರಾಬಳಗದಲ್ಲಿದ್ದಾರೆ. ಸಂದೀಪ್ ಕುಮಾರ್ ಛಾಯಾಗ್ರಹಣ, ಮನು ಶೇಡ್ಗಾರ್ ಸಂಕಲನ ಹಾಗೂ ಕೃಷ್ಣ ಪ್ರಸಾದ್ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ.



## ಏಪ್ರಿಲ್ 10ಕ್ಕೆ ತೆರೆಗೆ ಬರ್ತಿದೆ 'ವಿದ್ಯಾಪತಿ'

ನಾಡಿನ ಎಲ್ಲೆಡೆ ಸಂಕ್ರಾಂತಿ ಸಂಭ್ರಮ ಕಳೆಗಟ್ಟಿದೆ. ಕನ್ನಡ ಚಿತ್ರರಂಗದಲ್ಲಿಯೂ ಸುಗ್ಗಿ ಸಂಭ್ರಮ ಜೋರಾಗಿದೆ. ತಾರೆಯರು ಅದ್ದೂರಿ ಸಂಕ್ರಾಂತಿ ಸೆಲೆಬ್ರೆಟ್ ಮಾಡುತ್ತಿದ್ದಾರೆ. ಈ ಸುಗ್ಗಿ ಹಬ್ಬದ ವಿಶೇಷವಾಗಿ ಡಾಲಿ ಪಿಕ್ಚರ್ಸ್ ಸಿಹಿ ಸುದ್ದಿ ಕೊಟ್ಟಿದೆ. ಕಳೆದ ಸಂಕ್ರಾಂತಿ ಹಬ್ಬಕ್ಕೆ ವಿದ್ಯಾಪತಿ ಸಿನಿಮಾ ಅನೌನ್ಸ್ ಮಾಡಿದ್ದ ಡಾಲಿ ಧನಂಜಯ್ ಈ ಬಾರಿಯ ಸುಗ್ಗಿ ಹಬ್ಬಕ್ಕೆ ವಿದ್ಯಾಪತಿ ಆಗಮನದ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ವಿಶೇಷವಾದ ವಿಡಿಯೋ ಮೂಲಕವೇ ವಿದ್ಯಾಪತಿ ಬಿಡುಗಡೆ ದಿನಾಂಕ ಘೋಷಣೆ ಮಾಡಿದ್ದಾರೆ. ಧನಂಜಯ್ ಒಡೆತನದ ಡಾಲಿ ಪಿಕ್ಚರ್ಸ್‌ನ ನಾಲ್ಕನೇ ಚಿತ್ರ ವಿದ್ಯಾಪತಿ ಏಪ್ರಿಲ್ 10ಕ್ಕೆ ತೆರೆಗೆ ಬರ್ತಿದೆ. ಈ ಚಿತ್ರದಲ್ಲಿ ಟಗರು ಪಲ್ಯದಲ್ಲಿ ನಾಯಕನಾಗಿ ಮಿಂಚಿದ್ದ ನಾಗಭೂಷಣ್ ಕರಾಟೆ ಕಿಂಗ್ ಅವತಾರವೆತ್ತಿದ್ದಾರೆ. ಕರಾಟೆ ಮಾಸ್ಟರ್ ಆಗಿ ಇಲ್ಲಿ ರಂಗಾಯಣ ರಘು ಅಭಿನಯಿಸಿದ್ದಾರೆ. ನಾಯಕಿಯಾಗಿ ಮಲೈಕಾ ಟಿ. ವಸುಪಾಲ್ ನಾಗಭೂಷಣ್‌ಗೆ ಜೋಡಿಯಾಗಿ ಸಾಥ್ ಕೊಟ್ಟಿದ್ದು, ಅಷ್ಟೇ ಅಲ್ಲದೇ ಬಹುದೊಡ್ಡ ತಾರಾಗಣವಿದ್ದು ನಂತರದ ದಿನಗಳಲ್ಲಿ ಅದರ ವಿವರಗಳನ್ನು ಚಿತ್ರತಂಡ ಹಂಚಿಕೊಳ್ಳಲಿದೆ.



## ಹೀರೋ ಆಗ್ತಿದ್ದಾರೆ ಲಕ್ಷ್ಮೀ ಬಾರಮ್ಮ ಖ್ಯಾತಿಯ ಬ್ರೋ ಗೌಡ

ರಾಘು, ಶೆಫ್ ಚಿದಂಬರದಂತಹ ವಿಭಿನ್ನ ಸಿನಿಮಾಗಳನ್ನು ನಿರ್ದೇಶನ ಮಾಡಿದ್ದ ಎಂ ಆನಂದ್ ರಾಜ್ ಈಗ ಹೊಸ ಸಿನಿಮಾ ಕೈಗೆತ್ತಿಗೊಂಡಿದ್ದಾರೆ. ಬಿಗ್ ಬಾಸ್ ಸೀಸನ್ 8ರಲ್ಲಿ ಸ್ಪರ್ಧಿಸಿ ಜನಪ್ರಿಯತೆ ಪಡೆದಿರುವ, ಆ ಬಳಿಕ ಲಕ್ಷ್ಮೀ ಬಾರಮ್ಮ ಸೀರಿಯಲ್ ಮೂಲಕ ಕಿರುತೆರೆ ಮನೆ ಮಾತನಾಗಿರುವ ಬ್ರೋ ಗೌಡ ಶಮಂತ್ ಅವರನ್ನು ಹೀರೋ ಆಗಿ ಚಿತ್ರರಂಗಕ್ಕೆ ಪರಿಚಯಿಸುತ್ತಿದ್ದಾರೆ. ಲಕ್ಷ್ಮೀ ಬಾರಮ್ಮ ಧಾರವಾಹಿಯ ಬ್ರೋ ಗೌಡ ಶಮಂತ್ ನಾಯಕನಾಗಿ ಚಿತ್ರರಂಗಕ್ಕೆ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಚಿತ್ರಕ್ಕೆ ಎಂ ಆನಂದ್ ರಾಜ್ ಆಕ್ಷನ್ ಕಟ್ ಹೇಳಲಿದ್ದಾರೆ. ಇದು ಕನ್ನಡದ ಮೊದಲ ಝೂಂಬಿ ಸಿನಿಮಾ. ಚಿತ್ರದಲ್ಲಿ ಹೈ-ಲೆವೆಲ್ ಆಕ್ಷನ್ ಸೀನ್‌ಗಳು ಇರುತ್ತವೆ. ಹಾಲಿವುಡ್ ಸಿನಿಮಾಗಳಲ್ಲಿ ಇರುವಂತಹ ಆಕ್ಷನ್‌ಅನ್ನು ಇಲ್ಲಿ ನೋಡಬಹುದು. ಹಾಗಾಗಿ, ಇದನ್ನು ವೈಲೆಂಟ್ ಆಕ್ಷನ್ ಡ್ರಾಮಾ ಅಂತ ಆನಂದ್ ಹೇಳಿದ್ದಾರೆ.



## ಯುವರಾಜ್ ಕುಮಾರ್‌ಗೆ ಸಂಜನಾ ಆನಂದ್ ಜೋಡಿ

ರೋಹಿತ್ ಪದಕಿ ಸಾರಥ್ಯದ ಎಕ್ಕ ಸಿನಿಮಾದ ಶೂಟಿಂಗ್ ಭರದಿಂದ ಸಾಗುತ್ತಿದೆ. ಅಂದುಕೊಂಡ ಮುಹೂರ್ತದಂದು ಅಂದರೆ ಜೂನ್ 6ಕ್ಕೆ ಸಿನಿಮಾವನ್ನು ತೆರೆಗೆ ತರುವ ತಯಾರಿಯಲ್ಲಿರುವ ಚಿತ್ರತಂಡ ಸಂಕ್ರಾಂತಿ ಹಬ್ಬದ ವಿಶೇಷ ಹೊಸ ಅಪ್ ಡೇಟ್ ಕೊಟ್ಟಿದೆ. ಪಿಆರ್‌ಕೆ ಪ್ರೊಡಕ್ಷನ್ಸ್, ಕೆಆರ್‌ಜಿ ಸ್ಟುಡಿಯೋಸ್ ಹಾಗೂ ಜಯಣ್ಣ ಕಂಬೈನ್ಸ್ ಬ್ಯಾನರ್‌ಗಳ ಅಡಿಯಲ್ಲಿ ನಿರ್ಮಾಣವಾಗುತ್ತಿರುವ 'ಎಕ್ಕ' ಸಿನಿಮಾದಲ್ಲಿ ಯುವರಾಜ್ ಕುಮಾರ್ ನಾಯಕನಾಗಿ ನಟಿಸುತ್ತಿದ್ದು, ಸಂಪದಾ ನಾಯಕಿಯಾಗಿ ಸಾಥ್ ಕೊಡುತ್ತಿದ್ದಾರೆ. ಇದೀಗ ಚಿತ್ರತಂಡ ಮತ್ತೊಬ್ಬ ನಾಯಕಿಯನ್ನು ಪರಿಚಯಿಸಿದೆ. ಸಲಗ ಸಿನಿಮಾದ ಸುಂದರಿ ಸಂಜನಾ ಆನಂದ್ ಎಕ್ಕ ಚಿತ್ರದ ಮತ್ತೊಬ್ಬ ನಾಯಕಿಯಾಗಿ ಬಣ್ಣ ಹಚ್ಚಿದ್ದಾರೆ. ತೊದಲು ಪ್ರೀತಿಯ ಮೊದಲ ಪರಿಚಯವಾಗಿ ಚಿತ್ರತಂಡ ಸಂಜನಾ ಆನಂದ್ ತಮ್ಮ ಬಳಗಕ್ಕೆ ಸ್ವಾಗತಿಸಿದೆ. ಇತ್ತೀಚೆಗಷ್ಟೇ ಪುನೀತ್ ರುದ್ರನಾಗ್ "ಎಕ್ಕ" ತಂಡ ಸೇರಿಕೊಂಡಿದ್ದರು. ಈಗ ಸಂಜನಾ ಆನಂದ್ ಚಿತ್ರದ ಮತ್ತೊಬ್ಬ ನಾಯಕಿಯಾಗಿ ನಟಿಸಲಿದ್ದಾರೆ. ಕೆಮಿಸ್ಟ್ರಿ ಆಫ್ ಕರಿಯಪ್ಪ ಚಿತ್ರದ ಮೂಲಕ ಚಿತ್ರರಂಗಕ್ಕೆ ಮೊದಲ ಹೆಜ್ಜೆ ಇಟ್ಟಿದ್ದ ಸಂಜನಾ ನಂತರ ದುನಿಯಾ ವಿಜಯ್ ಕುಮಾರ್ ಅವರೊಂದಿಗೆ ಸಲಗ ಚಿತ್ರದಲ್ಲಿ ನಟಿಸಿದ್ದರು.






# ಆಗಸ್ಟ್ 15ರಂದು ಬಿಡುಗಡೆಯಾಗಲಿದೆ "45"



ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ "45" ಚಿತ್ರ ಆಗಸ್ಟ್ 15, ಸ್ವಾತಂತ್ರ್ಯ ದಿನೋತ್ಸವದಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ರಿಲೀಸ್ ಡೇಟ್ ಅನೌನ್ಸ್‌ಮೆಂಟ್‌ಗಾಗಿಯೇ ನಿರ್ದೇಶಕ ಅರ್ಜುನ್ ಜನ್ಯ ಪ್ರಜ್ವಲ್ ಅರಸ್ ಎಂಬ ಯುವ ಪ್ರತಿಭೆಯಿಂದ 3ಡಿ ತಂತ್ರಜ್ಞಾನದಲ್ಲಿ ವಿಭಿನ್ನ ವಿಡಿಯೋ ಮಾಡಿಸಿದ್ದಾರೆ. ತಾಂತ್ರಿಕ ಶ್ರೀಮಂತಿಕೆಯಿಂದ ಕೂಡಿರುವ ಈ ವಿಡಿಯೋದಲ್ಲಿ ಸ್ಕೂಟರ್ ಏರಿ ಬರುವ ಶಿವರಾಜಕುಮಾರ್ ಆಕ್ರಮಣಕಾರರನ್ನು ಶೂಟ್ ಮಾಡುತ್ತಾ ಬರುತ್ತಿರುತ್ತಾರೆ. ಕೊನೆಗೆ ಒಂದು ಗುಡ್ಡವನ್ನು ಶೂಟ್ ಮಾಡಿದಾಗ ಅದು ಸಿಡಿದು, ಬಂಡೆಯಲ್ಲಿ ಮೂರು ನಾಯಕ ನಟರ ಭಾವಚಿತ್ರ ಮೂಡಿ, ಬಿಡುಗಡೆಯ ದಿನಾಂಕ ಘೋಷಣೆಯಾಗುತ್ತದೆ. ಕನ್ನಡದಲ್ಲಿ ಈ ತರಹದ ಪ್ರಯತ್ನ ತೀರ ಅಪರೂಪ. ಶಿವಣ್ಣ ಅವರ ಸ್ಟೈಲಿಶ್ ಲುಕ್‌ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.

# ತುಳು ಚಿತ್ರಕ್ಕೆ "ಜೈ" ಎಂದ ಸುನೀಲ್ ಶೆಟ್ಟಿ..



ರಾಕ್‌ಸ್ಟಾರ್ ರೂಪೇಶ್ ಶೆಟ್ಟಿ ಅಭಿನಯ ಮತ್ತು ನಿರ್ದೇಶನದಲ್ಲಿ ಮೂಡಿ ಬರುತ್ತಿರುವ "ಜೈ" ತುಳು ಸಿನಿಮಾದಲ್ಲಿ ಬಾಲಿವುಡ್ ನಟ ಸುನೀಲ್ ಶೆಟ್ಟಿ ನಟಿಸುತ್ತಿದ್ದಾರೆ. ಅವರು ಪತ್ರಿಕಾ ಘೋಷ್ಠಿಯಲ್ಲಿ ಮಾತಾಡುತ್ತಾ ಅನೇಕ ವರ್ಷಗಳಿಂದ ತುಳು ಸಿನಿಮಾದಲ್ಲಿ ಅಭಿನಯಿಸಬೇಕೆಂಬ ಇಚ್ಚೆ ಇತ್ತು. ಆದರೆ ಅದಕ್ಕೆ ಕಾಲ ಕೂಡಿ ಬರಲಿಲ್ಲ. ಈಗ ರೂಪೇಶ್ ಶೆಟ್ಟಿ ನಿರ್ದೇಶನದ, ಜೈ ತುಳು ಸಿನಿಮಾದಲ್ಲಿ ಪ್ರಮುಖ ಪಾತ್ರವೊಂದರಲ್ಲಿ ಅಭಿನಹಿಸುತ್ತಿದ್ದೇನೆ. ನಾನು ತುಳುನಾಡಿನವನು. ಇಲ್ಲಿ ಎಲ್ಲವೂ ಇದೆ. ಇಲ್ಲಿಯ ನದಿ, ಸಮುದ್ರ, ದೈವಸ್ಥಾನ, ದೇವಸ್ಥಾನ ಎಲ್ಲವೂ ಸಿನಿಮಾದಲ್ಲಿ ಬರಬೇಕು. ವಿಶ್ವದಲ್ಲಿ ನಮ್ಮ ತುಳುನಾಡು ಪ್ರಖ್ಯಾತಿ ಪಡೆಯಬೇಕು. ಮುಂದೆ ತುಳುವಿನಲ್ಲಿ ಪೂರ್ಣ ಪ್ರಮಾಣದ ಹಾಸ್ಯ ಚಿತ್ರದಲ್ಲಿ ಅಭಿನಯಿಸುವ ಆಸೆ ಇದೆ ಎಂದರು.

# ಬಲರಾಮನ ದಿನಗಳಲ್ಲಿ ಅತುಲ್ ಕುಲಕರ್ಣಿ..

ಪದ್ಮಾವತಿ ಫಿಲಂಸ್ ಲಾಂಛನದಲ್ಲಿ ಪದ್ಮಾವತಿ ಜಯರಾಂ ಹಾಗೂ ಶ್ರೇಯಸ್ ಅವರು ಅಪಾರ ವೆಚ್ಚದಲ್ಲಿ ಅದ್ದೂರಿಯಾಗಿ ನಿರ್ಮಿಸುತ್ತಿರುವ ಹಾಗೂ "ಆ ದಿನಗಳು" ಖ್ಯಾತಿಯ ಕೆ. ಎಂ. ಚೈತನ್ಯ ನಿರ್ದೇಶನದಲ್ಲಿ ಟೈಗರ್ ವಿನೋದ್ ಪ್ರಭಾಕರ್ ನಾಯಕರಾಗಿ ನಟಿಸುತ್ತಿರುವ "ಬಲ ರಾಮನ ದಿನಗಳು" ಚಿತ್ರಕ್ಕೆ ಮೈಸೂರಿನಲ್ಲಿ ಬಿರುಸಿನ ಚಿತ್ರೀಕರಣ ನಡೆಯುತ್ತಿದೆ. ಈ ಚಿತ್ರದಲ್ಲಿ ಕನ್ನಡ, ತೆಲುಗು, ತಮಿಳು, ಹಿಂದಿ, ಮಲಯಾಳಂ, ಮರಾಠಿ ಹಾಗೂ ಇಂಗ್ಲೀಷ್ ಭಾಷೆಗಳ ಚಿತ್ರಗಳಲ್ಲಿ ನಟಿಸಿರುವ ಅತುಲ್ ಕುಲಕರ್ಣಿ ವಿಶೇಷ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. "ಬಲರಾಮನ ದಿನಗಳು" ಚಿತ್ರತಂಡ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಅತುಲ್ ಕುಲಕರ್ಣಿ ಅವರಿಗೆ ಸ್ವಾಗತ ಕೋರಿದೆ. ವಿನೋದ್ ಪ್ರಭಾಕರ್ ನಾಯಕರಾಗಿ ನಟಿಸುತ್ತಿರುವ ಈ ಚಿತ್ರದಲ್ಲಿ ನಾಯಕಿಯಾಗಿ ಪ್ರಿಯಾ ಆನಂದ್ ಅಭಿನಯಿಸುತ್ತಿದ್ದಾರೆ. ಇದು 1980 ರ ಕಾಲಘಟ್ಟದ ಕಥೆಯಾಗಿದೆ.



# ಫೆಬ್ರವರಿ 21ಕ್ಕೆ "ಮೀರಾ" ಚಲನಚಿತ್ರ ತೆರೆಗೆ..

ಅಸ್ತ್ರ ಪ್ರೊಡಕ್ಷನ್‌ನ ಬ್ಯಾನರ್‌ನಲ್ಲಿ ಲಂಚುಲಾಲ್ ಕೆ. ಎಸ್. ನಿರ್ಮಿಸಿರುವ, ಅಶ್ವಥ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶಿಸಿರುವ 'ಮೀರಾ' ಚಲನಚಿತ್ರ ಫೆಬ್ರವರಿ 21ಕ್ಕೆ ಬಿಡುಗಡೆಯಾಗಲಿದೆ, ಇದು ತುಳು ಸಿನಿಮಾ ಇಂಡಸ್ಟ್ರಿಯಲ್ಲಿ ಮೊದಲ ಮಹಿಳಾ ಪ್ರಧಾನ ಚಿತ್ರವಾಗಿದ್ದು ಮಹತ್ವದ ಮೈಲಿಗಲ್ಲು ಆಗಲಿದೆ, ಈ ಚಿತ್ರದಲ್ಲಿ ಇಶಿತಾ ಶೆಟ್ಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಅರವಿಂದ್ ಬೋಳಾರ್, ಸ್ವರಾಜ್ ಶೆಟ್ಟಿ, ಜೆ.ಪಿ. ತೂಮಿನಾಡು, ಪ್ರಕಾಶ್ ತೂಮಿನಾಡು, ಮಂಜು ರೈ ಮೂಳೂರು, ರೂಪಶ್ರೀ ವರ್ಕಾಡಿ, ಯತೀಶ್ ಪೂಜಾರಿ, ಅಶ್ವಥ್, ಬೇಬಿ ಲಕ್ಷ್ಯ ಎಲ್ ಮುಂತಾದ ಹೆಸರಾಂತ ಕಲಾವಿದರ ಜತೆ ಮುಂಬೈ ಮೂಲದ ತುಳು ಬ್ಲಾಗರ್ ನಟಿ ರಕ್ಷಿತಾ ಶೆಟ್ಟಿ ಕಾಣಿಸಿಕೊಂಡಿದ್ದಾರೆ ಎಂದು ಚಿತ್ರದ ನಿರ್ಮಾಪಕ ಲಂಚುಲಾಲ್ ಕೆ. ಎಸ್. ಪತ್ರಿಕಾ ಗೋಷ್ಠಿಯಲ್ಲಿ ಮಾಹಿತಿ ನೀಡಿದರು.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 **9880109212**